ಸಂಪುಟ : 10 ಸಂಚಿಕೆ: 214 ಪುಟ : 4+2 ಬೆಲೆ: 3.00 ಶನಿವಾರ ಅಕ್ಟೋಬರ್ 04 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 214 Pages : 4+2 Price : 3.00 Saturday October 04 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಡಾ. ಎಂ.ಎಂ. ಕಲಬುರ್ಗಿಯವರಿಗೆ ಮರಣೋತ್ತರ 'ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ' ಪ್ರದಾನ

# ಡಾ. ಕಲಬುರ್ಗಿಯವರು ಪ್ರಶಸ್ತಿಗೆ ಬಾಗಿದವರಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಲಿಂ.ತೋಂಟದ ಸಿದ್ಧಲಿಂಗ ಶ್ರೀಗಳು ಮತ್ತು ಎಂ.ಎಂ. ಕಲಬುರ್ಗಿ ಅವರ ಸಂಬಂಧವು ಒಡಲೆರಡು, ಜೀವ ಒಂದು ಎನ್ನುವ ರೀತಿಯಲ್ಲಿತ್ತು ಎಂದು ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಡಾ. ವೀರಣ್ಣ ರಾಜೂರ ಹೇಳಿದರು.

ಶುಕ್ರವಾರ ತೋಂಟದಾರ್ಯ ಮಠದ ಆವರಣದಲ್ಲಿನ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿವಾನುಭವ ಮಂಟಪದಲ್ಲಿ ಲಿಂ. ಸಿದ್ಧಲಿಂಗ ಶ್ರೀಗಳ 7ನೇ ಪುಣ್ಯಸ್ಮರಣೆ, ಮರಣವೇ ಮಹಾನವಮಿ ಆಚರಣೆ ಹಾಗೂ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ ಪ್ರದಾನ–2025ರ ಸಮಾರಂಭದಲ್ಲಿ ಅವರು ಮಾತನಾಡಿದರು.

ಪುಸ್ತಕ ಪ್ರೇಮಿಗಳಾಗಿದ್ದ ಸಿದ್ಧಲಿಂಗ ಶ್ರೀಗಳ ಮನವೊಲಿಸಿ, ತೋಂಟದಾರ್ಯ ಮಠದಲ್ಲಿ ಲಿಂಗಾಯತ ಅಧ್ಯಯನ ಸಂಸ್ಥೆ ಆರಂಭವಾಗಲು ಕಲಬುರ್ಗಿ ಅವರೇ ಕಾರಣರು. ಇಂದು ಆ ಸಂಸ್ಥೆಯ ಮೂಲಕ 500ಕ್ಕೂ ಹೆಚ್ಚು ಕೃತಿಗಳು ಪ್ರಕಟವಾಗಿವೆ. ವಿಶ್ವವಿದ್ಯಾಲಯವೊಂದರ ಪ್ರಸಾರಾಂಗಕ್ಕಿಂತ ಹೆಚ್ಚು ಕೃತಿಗಳನ್ನು ಸಾಹಿತ್ಯ ಕ್ಷೇತ್ರಕ್ಕೆ ನೀಡಿದೆ ಎಂದರು.

ಎಂ.ಎಂ. ಕಲಬುರ್ಗಿ ಅವರು ಯಾವುದೇ ಪ್ರಶಸ್ತಿಗೆ ಬೀಗಲಿಲ್ಲ, ಬಾಗಿದವರೂ ಅಲ್ಲ. ಬಂದ ಪ್ರಶಸ್ತಿಯನ್ನು ಗೌರವದಿಂದ ಸ್ವೀಕರಿಸಿ, ಪ್ರಶಸ್ತಿಯ ಮೊತ್ತವನ್ನು ಸಮಾಜಕ್ಕೆ ಅರ್ಪಿಸಿದವರು. ಕಲಬುರ್ಗಿ ಅವರಿಗೆ ಸಾಹಿತ್ಯ ಅಕಾಡೆಮಿಯ 6 ಪ್ರಶಸ್ತಿ ಒಳಗೊಂಡು ಒಟ್ಟು 32 ಪ್ರತಿಷ್ಠಿತ ಪ್ರಶಸ್ತಿಗಳು ಸಂದಿವೆ. ಈಗ ತೋಂಟದಾರ್ಯ ಶಿಕ್ಷಣ ಸಂಸ್ಥೆಗಳ ನೌಕರರು ಒಟ್ಟಾಗಿ ನೀಡುತ್ತಿರುವ ಈ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ 33ನೇಯದ್ದಾಗಿದ್ದು, ಅತ್ಯಂತ ಮಹತ್ವಪೂರ್ಣ ಪ್ರಶಸ್ತಿಯಾಗಿದೆ ಎಂದರು.

ತೋಂಟದ ಸಿದ್ದರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ನಿಜಗುಣಪ್ರಭು ತೋಂಟದಾರ್ಯ ಸ್ವಾಮೀಜಿ, ಬೈರನಹಟ್ಟಿಯ ದೊರೆಸ್ವಾಮಿ ವಿರಕ್ತಮಠ ಶಾಂತಲಿಂಗ ಸ್ವಾಮೀಜಿ, ಸಂಡೂರಿನ ಪ್ರಭು ಸ್ವಾಮೀಜಿ, ಆಳಂದದ ಕೋರಣೇಶ್ವರ ಸ್ವಾಮೀಜಿ, ಅರಸಿಕೆರೆಯ ಶಾಂತಲಿಂಗ ದೇಶೀಕೇಂದ್ರ ಸ್ವಾಮೀಜಿ, ಶಿವಪ್ರಸಾದ ದೇವರು, ಚಂದ್ರಶೇಖರ ದೇವರು, ಶಿವರುದ್ರಯ್ಯ ಸ್ವಾಮೀಜಿ ಬಾದಾಮಿ, ಬೇಲೂರಿನ ಶಂಕರಾನಂದ ಸ್ವಾಮೀಜಿ, ರೇವಣಸಿದ್ದೇಶ್ವರ ಶಿವಾಚಾರ್ಯರು, ಕೆಂಚಬಸವ ಶಿವಾಚಾರ್ಯರು ಕಲಬುರ್ಗಿ, ಗಂಗಾಧರ ಸ್ವಾಮೀಜಿ ಯಶವಂತನಗರ, ಮಹಾಂತ ದೇವರು ಬೇಲೂರ (ಹಾಸನ), ಶಾಂತವೀರೇಶ್ವರ ಸ್ವಾಮೀಜಿ, ವೆಂಕಟಾಪುರ ಶರಣರು ಸಮ್ಮುಖ ವಹಿಸಿದ್ದರು.

ಸಮಾರಂಭದಲ್ಲಿ ಯಾಕೂಬ್ ಮಸೀಹ್ ಬರೆದ ಹಿಂದಿ ಮೂಲದ ಕೃತಿಯನ್ನು ಕನ್ನಡಕ್ಕೆ ಅನುವಾದಿಸಿದ ತೋಂಟದ ಸಿದ್ಧರಾಮ ಶ್ರೀಗಳ 'ತೌಲನಿಕ ಧರ್ಮದರ್ಶನ' ಕೃತಿಯನ್ನು ಬಿಡುಗಡೆಗೊಳಿಸಲಾಯಿತು. ಹಂಪಿ ಕನ್ನಡ ವಿ.ವಿ ವಿಶ್ರಾಂತ ಕುಲಪತಿ ಮಲ್ಲಿಕಾ ಘಂಟಿ, ಮಾಜಿ ಸಂಸದ ಐ.ಜಿ. ಸನದಿ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ರಾಮಕೃಷ್ಣ ದೊಡ್ಡಮನಿ, ಮಲ್ಲಿಕಾರ್ಜುನ ಅಕ್ಕಿ, ಎಸ್.ಎಸ್. ಪಟ್ಟಣಶೆಟ್ಟರ್, ಕೊಟ್ರೇಶ ಮೆಣಸಿನಕಾಯಿ, ಬಾಲಚಂದ್ರ ಭರಮಗೌಡ್ರ ಉಪಸ್ಥಿತರಿದ್ದರು. ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ನಿರೂಪಿಸಿದರು.




#### ಪ್ರಶಸ್ತಿ ಪ್ರದಾನ

ಸಮಾರಂಭದಲ್ಲಿ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಸ್ಮಾರಕ ರಾಷ್ಟ್ರೀಯ ಪ್ರಶಸ್ತಿ–2025ನ್ನು ಮರಣೋತ್ತರವಾಗಿ ಎಂ.ಎಂ. ಕಲಬುರ್ಗಿ ಅವರಿಗೆ ಪ್ರದಾನ ಮಾಡಲಾಯಿತು. ಪ್ರಶಸ್ತಿಯು 5 ಲಕ್ಷ ರೂ. ನಗದು, ಸ್ಮರಣಿಗೆ ಒಳಗೊಂಡಿದ್ದು, ಪ್ರಶಸ್ತಿಯನ್ನು ಕಲಬುರ್ಗಿ ಅವರ ಪತ್ನಿ ಉಮಾದೇವಿ ಕಲಬುರ್ಗಿ ಸ್ವೀಕರಿಸಿದರಲ್ಲದೆ, ಪ್ರಶಸ್ತಿ ಮೊತ್ತವನ್ನು ಶ್ರೀಮಠದ ನೌಕರರ ಮಕ್ಕಳ ಕಲ್ಯಾಣಕ್ಕೆ ಮರಳಿ ನೀಡಿದರು.

> ಕಲಬುರ್ಗಿ ಅವರು ಬಸವತತ್ವ ಬೆಳೆಯಬೇಕು ಎನ್ನುವ ಗಟ್ಟಿ ಧ್ವನಿಯಾಗಿದ್ದರು. ಲಿಂಗಾಯತ ಧರ್ಮದ ಬಗ್ಗೆ ಅವರಿಗೆ ಸ್ಪಷ್ಟತೆ ಇತ್ತು. ಅವರ ಚಿಂತನೆಗಳನ್ನು ತೋಂಟದಾರ್ಯ ಮಠ ಕಾರ್ಯರೂಪಕ್ಕೆ ತಂದಿದೆ. ಹೀಗಾಗಿ ಕಲಬುರ್ಗಿಯವರನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸ ಆಗಬೇಕು.
>
> **– ನಿಜಗುಣಪ್ರಭು ತೋಂಟದಾರ್ಯ ಸ್ವಾಮೀಜಿ.**

> ಡಾ. ಎಂ.ಎಂ. ಕಲಬುರ್ಗಿ ಸಾವಿಲ್ಲದ ಗುರುಗಳು. ಅವರು ಬದುಕಿದ್ದರೆ ಪ್ರಸ್ತುತ ರಾಜಕೀಯ, ಸಾಮಾಜಿಕ ಗೊಂದಲಗಳನ್ನು ಕಟುವಾಗಿ ಟೀಕಿಸುವ ಜೊತೆಗೆ ಮಾರ್ಗದರ್ಶನ ಮಾಡುವ ಶಕ್ತಿ ಹೊಂದಿದ್ದರು. ಅಂಥ ಗುರುಗಳಿಗೆ ತೋಂಟದ ಸಿದ್ಧಲಿಂಗ ಶ್ರೀಗಳ ರಾಷ್ಟ್ರೀಯ ಪ್ರಶಸ್ತಿ ಸಿಕ್ಕಿರುವುದು ಹೆಮ್ಮೆ ತಂದಿದೆ.
>
> **– ಮಲ್ಲಿಕಾ ಘಂಟಿ. ವಿಶ್ರಾಂತ ಕುಲಪತಿಗಳು.**

## ಪಲ್ಟಿ ಹೊಡೆದ ಕಾರು; ಮಗು ಸೇರಿ ಮೂವರು ದುರ್ಮರಣ!



■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಭೀಕರ ಅಪಘಾತದಲ್ಲಿ ಮೂವರು ಸಾವನ್ನಪ್ಪಿರುವ ಘಟನೆ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿನ ಮೇಟಿಕುರ್ಕೆ ಬಳಿ ಜರುಗಿದೆ.

ಕಾರು ಪಲ್ಟಿ ಹೊಡೆದ ಪರಿಣಾಮ ಈ ದುರಂತ ಸಂಭವಿಸಿದೆ. 26 ವರ್ಷದ ಮಲ್ಲಮ್ಮ, 25 ವರ್ಷದ ಸರೋಜಮ್ಮ, ಮತ್ತು ಪುಟ್ಟ ಮಗು ಮೃತರು ಎಂದು ಗುರುತಿಸಲಾಗಿದೆ.

ಘಟನೆ ಸ್ಥಳಕ್ಕೆ ಡಿವೈಎಸ್ಪಿ ಶಿವಕುಮಾರ್ ಮತ್ತು ಸಿಪಿಐ ಗುಡ್ಡಪ್ಪ ಭೇಟಿ ನೀಡಿ ಪರಿಶೀಲನೆ ಮಾಡಿದ್ದು, ಹಿರಿಯೂರು ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

### ಪತ್ರಿಕಾಗೋಷ್ಠಿಯಲ್ಲಿ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಮಾಹಿತಿ

# ಹಿಂದುಳಿದ ವರ್ಗಗಳ ಜಾಗೃತಿ ಸಮಾವೇಶ ನಾಳೆ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣದ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಅಕ್ಟೋಬರ್ 5ರಂದು ಹಿಂದುಳಿದ ವರ್ಗಗಳ ಜಾಗೃತಿ ಸಮಾವೇಶ ಜರುಗಲಿದ್ದು, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಪಿಡಬ್ಲ್ಯುಡಿ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಒಬಿಸಿ ವರ್ಗಗಳಿಗೆ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದೆ. ಈ ಹಿನ್ನೆಲೆಯಲ್ಲಿ ಯೋಜನೆಗಳ ಮಹತ್ವಗಳ ಕುರಿತು ಒಬಿಸಿ ವರ್ಗದ ಜನರಿಗೆ ತಿಳುವಳಿಕೆ ನೀಡುವ ಉದ್ದೇಶದಿಂದ ಜಾಗೃತಿ ಸಮಾವೇಶವನ್ನು ರೋಣದಲ್ಲಿ ಹಮ್ಮಿಕೊಂಡಿದ್ದು, ಸಚಿವರಾದ ಮಧು ಬಂಗಾರಪ್ಪ, ಎಚ್.ಕೆ. ಪಾಟೀಲ ಭಾಗವಹಿಸಲಿದ್ದಾರೆ ಎಂದರು.



ಶಿವಾನಂದ ಬಾಚಂಗಿ ಮಾತನಾಡಿ, ಒಬಿಸಿಯವರು ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ದೃಷ್ಟಿಯಿಂದ ಮುಂದೆ ಬರಬೇಕು ಎನ್ನುವುದು ಕಾಂಗ್ರೆಸ್ ಪಕ್ಷದ ವರಿಷ್ಠರ ಅಭಿಲಾಷೆಯಾಗಿದೆ. ಅಲ್ಲದೆ, ಜನಾಂಗದ ಅಭಿವೃದ್ಧಿಗಾಗಿ ಹಲವಾರು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಅವುಗಳನ್ನು ಒಬಿಸಿ ಜನಾಂಗದವರು ಸದ್ಬಳಕೆ ಮಾಡಿಕೊಳ್ಳಬೇಕು ಎಂಬ ಮಹತ್ವದ ಉದ್ದೇಶದಿಂದ ಸಮಾವೇಶವನ್ನು ಹಮ್ಮಿಕೊಂಡಿದ್ದು, ಮತಕ್ಷೇತ್ರದ ಸುಮಾರು 5 ಸಾವಿರ ಜನರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಸಮಾವೇಶ ಶಾಸಕ ಜಿ.ಎಸ್. ಪಾಟೀಲರ ಮಾರ್ಗದರ್ಶನದಲ್ಲಿ ನಡೆಯಲಿದೆ ಎಂದರು.

ರಾಜ್ಯ ಉಪಾಧ್ಯಕ್ಷ ಎಚ್.ಎಸ್. ಸೋಂಪುರ, ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ಶರಣಪ್ಪ ಬೆಟಗೇರಿ, ಬಸವರಾಜ ನವಲಗುಂದ, ಯಚ್ಚರಗೌಡ ಗೋವಿಂದಗೌಡ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

> ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಣ್ಣ ಶೆಟ್ಟರ್ ಮಾತನಾಡಿ, ಒಬಿಸಿ ವರ್ಗದವರು ಕಾಂಗ್ರೆಸ್ ಪಕ್ಷದ ಹಿತ ಚಿಂತಕರು. ಈ ವರ್ಗದವರು ಅನ್ಯ ಪಕ್ಷದಲ್ಲಿದ್ದರೂ ಅವರಿಗೆ ಕಾಂಗ್ರೆಸ್ ಪಕ್ಷದ ಮಹತ್ವವನ್ನು ತಿಳಿಸಿ ಅವರನ್ನು ಕರೆತರುವ ಕೆಲಸವನ್ನು ನಾವೆಲ್ಲರೂ ಮಾಡಬೇಕಿದೆ. ಅಲ್ಲದೆ, ಸರಕಾರ ಒಬಿಸಿ ವರ್ಗದ ಜನರಿಗೆ ನೀಡಿರುವ ಸೌಲಭ್ಯಗಳನ್ನು ತಿಳಿಸುವುದು ಸಹ ಮುಖ್ಯವಾಗಿದ್ದು, ಪಕ್ಷದ ಒಬಿಸಿ ವರ್ಗದ ಮುಖಂಡರು ಸಮಾವೇಶದ ಯಶಸ್ವಿಗೆ ಶ್ರಮಿಸಬೇಕು ಎಂದರು.

## ಯೋಜನೆಗಳ ಪ್ರಯೋಜನ ಪಡೆದುಕೊಳ್ಳಿ




■ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರವು ಅಲ್ಪಸಂಖ್ಯಾತರ ಸಮುದಾಯದ ಕಲ್ಯಾಣಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಗಳ ಅನುಷ್ಠಾನಗೊಳಿಸುವ ಜಿಲ್ಲಾ ಸಮಿತಿಯ 1ನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಯೋಜನೆಯಡಿ ಬರುವ ಒಟ್ಟು 22 ಇಲಾಖೆಗಳ ಪ್ರಗತಿ ಪರಿಶೀಲಿಸಿ, ಅಲ್ಪಸಂಖ್ಯಾತರಿಗಾಗಿ ಮೀಸಲಿಟ್ಟ ಆರ್ಥಿಕ ಹಾಗೂ ಬೌದ್ಧಿಕ ಸೌಲಭ್ಯಗಳನ್ನು ಅರ್ಹರು ಪಡೆಯಲು ಸಹಕರಿಸಬೇಕು ಎಂದರು.

ಅಲ್ಪಸಂಖ್ಯಾತರ ಜಿಲ್ಲಾಧಿಕಾರಿಗಳಾದ ಅಮಿತ ಬಿದರಿ ಅನುಷ್ಠಾನಗೊಳಿಸುವ ಜಿಲ್ಲಾ ಸಮಿತಿಯ ಪ್ರಗತಿ ವರದಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರಾರಂಭಿಸಿ ವಿವಿಧ ಇಲಾಖೆಗಳ ವರದಿಯನ್ನು ಜಿಲ್ಲಾ ಸಮಿತಿಯ ಸದಸ್ಯರಿಗೆ ವಿವರಿಸಿದರು. ಜಿಲ್ಲಾ ಸಮಿತಿಯ ನಾಮನಿರ್ದೇಶಿತ ಸದಸ್ಯರು ಶಾಲೆಯಲ್ಲಿರುವ ಸಮಸ್ಯೆ, ಮೂಲಭೂತ ಸೌಕರ್ಯ ಹಾಗೂ ಶಿಕ್ಷಣದ ಗುಣಮಟ್ಟದ ಬಗ್ಗೆ ಗಮನಹರಿಸಿ ಸೌಲಭ್ಯಗಳನ್ನು ದೊರಕುವಂತೆ ಮಾಡಬೇಕೆಂದು ವಿನಂತಿಸಿದರು. ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲಾ ಮಟ್ಟದ ನಾಮ ನಿರ್ದೇಶಿತ ಸದಸ್ಯರು ಹಾಜರಿದ್ದರು.

### ಹಿಂದೂಗಳ ಮೇಲೆ ನಡೆದ ಹಲ್ಲೆಯನ್ನು ಖಂಡಿಸಿ ಹಿಂದೂಪರ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ

# ಹಲ್ಲೆಕೋರರನ್ನು ಬಂಧಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣದಲ್ಲಿ ಅ.2ರಂದು ಎಸ್‌ಡಿಪಿಐ ಮುಸ್ಲಿಂ ಪುಂಡರು ಮುಗ್ಧ ಹಿಂದೂಗಳ ಮೇಲೆ ಹಲ್ಲೆ ನಡೆಸಿದ್ದು, ದುಷ್ಕರ್ಮಿಗಳನ್ನು ಬಂಧಿಸುವಂತೆ ಆಗ್ರಹಿಸಿ ಶುಕ್ರವಾರ ಹಿಂದೂಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಪ್ರತಿಭಟನೆ ನಡೆಸಿ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಶ್ರೀರಾಮ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ, ಶ್ರೀರಾಮ ಸೇನೆಯ ಉತ್ತರ ಕರ್ನಾಟಕ ರಾಜ್ಯ ಕಾರ್ಯದರ್ಶಿ ಮಹೇಶ ರೋಖಡೆ, ತಾಲೂಕಾ ಹಿಂದೂ ಸಂಘಟನೆಗಳ ಸಂತೋಷ ಕುರಿ, ನಾಗರಾಜ ಲಕ್ಕುಂಡಿ, ಫಕ್ಕೀರೇಶ ರಟ್ಟಿಹಳ್ಳಿ ಮಾತನಾಡಿ, ಶಿರಹಟ್ಟಿ ತಾಲೂಕಿನಲ್ಲಿ ಮುಸ್ಲಿಂ ಪುಂಡರ ಉಪಟಳ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಮುಗ್ಧ ಹಿಂದೂಗಳನ್ನೇ ಗುರಿಯಾಗಿಸಿ ಹಲ್ಲೆ ನಡೆಸುತ್ತಿದ್ದಾರೆ. ಸೆ. 7ರಂದು ಶಿರಹಟ್ಟಿಯಲ್ಲಿ ನಡೆದ ಮುಸ್ಲಿಂರ ಸಣ್ಣ ಉರುಸಿನ ಗಂಧದ ಸಮಾರಂಭದಲ್ಲಿ ಪಿಎಸ್‌ಐ ಚನ್ನಯ್ಯ ದೇವೂರರ ಮೇಲೆಯೇ ಹಲ್ಲೆ ನಡೆಸಿದ್ದಾರೆ. ಕೆಲ ಪ್ರಭಾವಿ ಮುಸ್ಲಿಂ ಮುಖಂಡರು ಈ ಪುಂಡರ ಒತ್ತಡಕ್ಕೆ ಮಣಿದು ಚನ್ನಯ್ಯ ದೇವೂರ ಅವರನ್ನು ಶಿರಹಟ್ಟಿಯಿಂದ ಬೇರೆ ಕಡೆಗೆ ವರ್ಗಾವಣೆ ಮಾಡಿಸಿದ್ದಾರೆ. ಈ ಹಿಂದೆ ಲಕ್ಷ್ಮೇಶ್ವರದಲ್ಲಿ ನಡೆದಿದ್ದ ಘಟನೆಗೆ ವರ್ಗಾವಣೆಗೊಂಡಿದ್ದ ಈರಪ್ಪ ರಿತ್ತಿ ಅವರನ್ನು ಶಿರಹಟ್ಟಿಗೆ ವರ್ಗಾವಣೆ ಮಾಡಿದ್ದರಿಂದ ಮುಸ್ಲಿಂ ಎಸ್‌ಡಿಪಿಐ ಮತಾಂಧರು ತಾವು ಏನು ಮಾಡಿದರೂ ನಡೆಯುತ್ತೆ ಎಂಬ ಅಹಂನಲ್ಲಿದ್ದಾರೆ.

ಹಿಂದೂಗಳ ಪವಿತ್ರ ಹಬ್ಬ ನವರಾತ್ರಿಯ ಸಂಭ್ರಮವನ್ನು ಹಾಳು ಮಾಡಿ ಶಿರಹಟ್ಟಿಯಲ್ಲಿ ಶಾಂತಿ–ಸುವ್ಯವಸ್ಥೆಯನ್ನು ಹಾಳು ಮಾಡುವ ದುಷ್ಟ ಹುನ್ನಾರ ಹೊಂದಿರುವುದು ಈ ಘಟನೆಯಿಂದ ಸಾಬೀತಾಗುತ್ತಿದೆ. ಹಲ್ಲೆಯಲ್ಲಿ ಗಾಯಗೊಂಡಿರುವವರಿಗೆ ಸರಕಾರ ಕೂಡಲೇ ಪರಿಹಾರ ಘೋಷಿಸಬೇಕು. ಹಲ್ಲೆ ನಡೆಸಿರುವ ಎಸ್‌ಡಿಪಿಐ ಮುಸ್ಲಿಂ ಗೂಂಡಾಗಳನ್ನು ಈ ಕೂಡಲೇ ಬಂಧಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪ್ರವೀಣಗೌಡ ಪಾಟೀಲ, ವೀರಣ್ಣ ಅಂಗಡಿ, ರಾಜೀವರಡ್ಡಿ ಬಮ್ಮನಕಟ್ಟಿ, ರಾಮಣ್ಣ ಕಂಬಳಿ, ವೆಂಕಟೇಶ ದೊಡ್ಡಮನಿ, ಸೋಮು ಗುಡಿ, ಸೋಮನಗೌಡ ಮರಿಗೌಡ್ರ ಮುಂತಾದವರು ಉಪಸ್ಥಿತರಿದ್ದರು.



#### ಪೊಲೀಸ್ ಬಂದೋಬಸ್ತ್

ಶುಕ್ರವಾರ ಶಿರಹಟ್ಟಿ ಪಟ್ಟಣದಲ್ಲಿ ಹಿಂದೂಪರ ಸಂಘಟನೆಗಳು ಕರೆ ನೀಡಿದ್ದ ಪ್ರತಿಭಟನೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ನೇತೃತ್ವದಲ್ಲಿ ಮುಂಜಾಗ್ರತಾ ಕ್ರಮವಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಪೇಟೆ ಶ್ರೀ ಆಂಜನೇಯ ದೇವಸ್ಥಾನದಿಂದ ಅಪಾರ ಜನಸ್ತೋಮದೊಂದಿಗೆ ಹಿಂದೂ ಕಾರ್ಯಕರ್ತರು ಘೋಷಣೆ ಕೂಗುತ್ತಾ ತಹಸೀಲ್ದಾರ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು.

## ಸಾಕ್ಷಿ ಸುಭಾಷಿತ

"ಒಂದು ಉತ್ತಮ ಪುಸ್ತಕ ನೂರು ಸ್ನೇಹಿತರಿಗೆ ಸಮಾನ,ಆದರೆ ಒಬ್ಬ ಉತ್ತಮ ಸ್ನೇಹಿತ ಒಂದು ಗ್ರಂಥಾಲಯಕ್ಕೆ ಸಮಾನ"

–ಡಾ.ಎ.ಪಿ.ಜೆ. ಅಬ್ದುಲ್ ಕಲಾಂ

## ಸಂಪಾದಕೀಯ

### ಅನರ್ಹರಿಗೆ ಕತ್ತರಿ: ಸಾಮಾಜಿಕ ಭದ್ರತಾ ಯೋಜನೆಗಳ ಶುದ್ಧೀಕರಣದ ಅವಶ್ಯಕತೆ

ಇತ್ತೀಚೆಗೆ ರಾಜ್ಯ ಸರ್ಕಾರವು ಸಾಮಾಜಿಕ ಭದ್ರತಾ ಯೋಜನೆಗಳ ಅನರ್ಹ ಫಲಾನುಭವಿಗಳ ಪತ್ತೆ ಕಾರ್ಯವನ್ನು ತೀವ್ರಗೊಳಿಸಿರುವುದು ಸ್ವಾಗತಾರ್ಹ ಬೆಳವಣಿಗೆ. ಬಡತನ ರೇಖೆಗಿಂತ ಕೆಳಗಿರುವವರಿಗೆ (ಃಕಐ) ಮೀಸಲಾದ ಪಡಿತರ ಚೀಟಿಗಳು ಸೇರಿದಂತೆ, ವೃದ್ಧಾಪ್ಯ ವೇತನ, ವಿಧವಾ ವೇತನ ಮತ್ತು ಸಂಧ್ಯಾ ಸುರಕ್ಷಾ ಯೋಜನೆಗಳೂ ಸಹ ದುರುಪಯೋಗವಾಗುತ್ತಿರುವುದು ನಿಜಕ್ಕೂ ಕಳವಳಕಾರಿ.

ಸರ್ಕಾರದ ಯೋಜನೆಗಳ ಮೂಲ ಉದ್ದೇಶವು ಅಸಹಾಯಕರು, ಬಡವರು ಮತ್ತು ದುರ್ಬಲ ವರ್ಗದವರಿಗೆ ಸಹಾಯಹಸ್ತ ಚಾಚುವುದಾಗಿದೆ. ಆದರೆ, ನಕಲಿ ದಾಖಲೆ ಸೃಷ್ಟಿಸಿ ಅಥವಾ ಅರ್ಹತಾ ಮಾನದಂಡಗಳನ್ನು ತಪ್ಪಾಗಿ ಬಳಸಿ ಅನರ್ಹರು ಈ ಸೌಲಭ್ಯಗಳನ್ನು ಪಡೆಯುತ್ತಿರುವುದು, ನಿಜವಾದ ಅರ್ಹರ ಪಾಲಿನ ಅನ್ನವನ್ನು ಕಸಿಯುವ ಹೀನ ಕೃತ್ಯವಾಗಿದೆ.

ಆಹಾರ ಇಲಾಖೆಯು ನಕಲಿ ಬಿಪಿಎಲ್ ಕಾರ್ಡ್‌ಗಳ ಜಾಲ ಪತ್ತೆ ಹಚ್ಚುವ ಕೆಲಸವನ್ನು ಮುಂದುವರೆಸಿದೆ. ಇದರ ಬೆನ್ನಲ್ಲೇ, ಸಮಾಜ ಕಲ್ಯಾಣ ಇಲಾಖೆಯು ಸುಮಾರು 4,52,451 ವೃದ್ಧಾಪ್ಯ ವೇತನ ಫಲಾನುಭವಿಗಳನ್ನು ಅನರ್ಹರು ಎಂದು ಗುರುತಿಸಿ, ಅವರ ವೇತನವನ್ನು ರದ್ದುಗೊಳಿಸುವ ನಿರ್ಧಾರ ಕೈಗೊಂಡಿರುವುದು ವ್ಯವಸ್ಥೆಯನ್ನು ಶುದ್ಧೀಕರಿಸುವ ದಿಟ್ಟ ಹೆಜ್ಜೆಯಾಗಿದೆ.

ಈ ಕ್ರಮವು ಯೋಜನೆಗಳಲ್ಲಿನ ಪಾರದರ್ಶಕತೆ ಮತ್ತು ಜವಾಬ್ದಾರಿಯನ್ನು ಹೆಚ್ಚಿಸುತ್ತದೆ. ಸಂಪನ್ಮೂಲಗಳು ಅನರ್ಹರ ಪಾಲಾಗುವುದನ್ನು ತಡೆಗಟ್ಟಿ, ಅವು ನಿಜವಾದ ದುರ್ಬಲರಿಗೆ ಮತ್ತು ಅಗತ್ಯವುಳ್ಳವರಿಗೆ ತಲುಪುವಂತೆ ಮಾಡುವುದು ಸರ್ಕಾರದ ಆದ್ಯ ಕರ್ತವ್ಯವಾಗಬೇಕು.

ಯೋಜನೆಯ ಅನುಷ್ಠಾನದಲ್ಲಿ ಬಿಗಿ ಕ್ರಮ, ನಿಯಮಿತ ಪರಿಶೀಲನೆ ಮತ್ತು ದತ್ತಾಂಶಗಳ ಸಮರ್ಥ ಬಳಕೆ ಈ ಸುಧಾರಣಾ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಲು ಅತ್ಯಗತ್ಯ. ಸಾಮಾಜಿಕ ಭದ್ರತಾ ಜಾಲವನ್ನು ದುರುಪಯೋಗದಿಂದ ಮುಕ್ತಗೊಳಿಸಿದರೆ ಮಾತ್ರ, ಅದು ಸಮ ಸಮಾಜ ನಿರ್ಮಾಣದ ಆಶಯವನ್ನು ಈಡೇರಿಸಲು ಸಾಧ್ಯ.

ಲಕ್ಕುಂಡಿ ಗ್ರಾಮದೇವತೆ ಮರಗಮ್ಮ ದೇವಿಯ ವಿಜಯದಶಮಿ ಕಾರ್ಯಕ್ರಮ ಸಂಪನ್ನ

# ಭಾವೈಕ್ಯತೆ ಮೂಡಿಸಿದ ದಸರಾ ದರ್ಬಾರ್

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಲಕ್ಕುಂಡಿಯ ಗ್ರಾಮದೇವತೆ ಮರಗಮ್ಮ ದೇವಿಯ ವಿಜಯದಶಮಿ ದಸರಾ ದರ್ಬಾರ್ ಕಾರ್ಯಕ್ರಮವು ಗ್ರಾಮದಲ್ಲಿ ಸಾಂಪ್ರದಾಯಕವಾಗಿ, ಭಾವೈಕ್ಯತೆಯಿಂದ ಜರುಗಿತು.

ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಲಾಗಿರುವ ದ್ಯಾಮವ್ವ ದೇವಿಗೆ ಸಂಜೆ ವಿಶೇಷ ಪೂಜೆಯನ್ನು ಸಲ್ಲಿಸಿದ ನಂತರ ಮರಗಮ್ಮ ದೇವಿಯ ಮೂರ್ತಿಯನ್ನು ದೇವಸ್ಥಾನದ ಸುತ್ತ ಐದು ಸುತ್ತು ಪ್ರದಕ್ಷಿಣೆ ಹಾಕಿ ನಂತರ ದೇವಿಯ ದರ್ಬಾರ್ ಕಾರ್ಯಕ್ರಮಕ್ಕೆ ವಿರೂಪಾಕ್ಷಗೌಡ ಪಾಟೀಲ ಅವರ ಮನೆಯಲ್ಲಿ ದೇವಿಗೆ ಉಡಿ ತುಂಬುವುದರ ಮೂಲಕ ಚಾಲನೆ ದೊರೆಯಿತು. ಕಳೆದ 46 ವರ್ಷಗಳಿಂದ ನಡೆದು ಬಂದಿರುವ



ವಿಜಯದಶಮಿಯ ಸಂಪ್ರದಾಯದಂತೆ ಗ್ರಾಮದ ಗೌಡ್ರ, ಕುಲಕರ್ಣಿ, ಶ್ಯಾನಭೋಗರ, ಪತ್ತಾರ ಮನೆತನಗಳಲ್ಲಿ ದೇವಿಗೆ ಉಡಿ ತುಂಬುವ ಕಾರ್ಯಕ್ರಮ ನಡೆದು ಬಂದಿದೆ. ಅದರಂತೆ ಹಿಂದೆ 15 ಮನೆಗಳಲ್ಲಿ ಮಾತ್ರ ಉಡಿ ತುಂಬುವ ಕಾರ್ಯ ನೆರವೇರುತ್ತಿತ್ತು. ಕಳೆದ 8 ವರ್ಷಗಳಿಂದ 27 ಮನೆಗಳಲ್ಲಿ ಉಡಿ ತುಂಬುವ ಕಾರ್ಯಕ್ರಮವು ನಡೆದು ಬಂದಿದ್ದು, ಮುಸ್ಲಿಂ ಕುಟುಂಬವೂ ಸಹ ದೇವಿಗೆ ಉಡಿ ತುಂಬಿ ಪೂಜೆ ಸಲ್ಲಿಸಿ ಭಾವೈಕ್ಯತೆ ಮೆರೆದಿದ್ದಾರೆ ಎಂದು ಗ್ರಾಮದೇವತೆ ಸೇವಾ ಸಮಿತಿ ಅಧ್ಯಕ್ಷ ಪ್ರಕಾಶ ಅರಹುಣಸಿ, ಸದಸ್ಯ ಅಶೋಕ ಬೂದಿಹಾಳ ತಿಳಿಸಿದರು.

ಸರಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿಯ ಬನ್ನಿ ಮಹಾಂಕಾಳಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಬನ್ನಿ ಮುಡಿಯುವ ಕಾರ್ಯಕ್ಕೆ ಚಾಲನೆ ನೀಡಲಾಯಿತು. ಭಕ್ತರು ಪರಸ್ಪರ ಬನ್ನಿ ಕೊಡುವುದರ ಮೂಲಕ ಪ್ರೀತಿ ಸೌಹಾರ್ದತೆ ಮೆರೆದರು.

ಪುರಾಣ ಮಂಗಲೋತ್ಸವದಂಗವಾಗಿ ಗ್ರಾಮದದೇವತೆ ದೇವಸ್ಥಾನದಿಂದ ಗ್ರಾಮದ ಪ್ರಮುಖ ಬೀದಿಯಲ್ಲಿ ದ್ಯಾಮವ್ವ ದೇವಿಯ ಮೂರ್ತಿಯ ಮೆರವಣಿಗೆಯೊಂದಿಗೆ ಮಹಿಳೆಯರಿಂದ ಪೂರ್ಣಕುಂಭ ಮೆರವಣಿಗೆ ನಡೆಯಿತು.

ಗ್ರಾಮದೇವತೆಯಾದ ಮರಗಮ್ಮ ದೇವಿಯ ದಸರಾ ದರ್ಬಾರ್‌ನಲ್ಲಿ ಹಿರೇಮಸೂತಿಯ ಬಾಗಿಲಲ್ಲಿ ಮುಸಲ್ಮಾನ ಭಾಂದವರು ಉಡಿ ತುಂಬಿ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಕೊನೆಯ ಉಡಿ ತುಂಬುವ ಕಾರ್ಯವು ಗ್ರಾಮದಲ್ಲಿ ಪ್ರಸಿದ್ಧಿ ಪಡೆದಿರುವ ಕಾಮಣಿ ಬಳ್ಳಿ ಹಾಕುವ ನಾಟಿ ವೈದ್ಯ ಹುಸೇನಸಾಬ ಗುಡಗೇರಿ ಮನೆಯಲ್ಲಿ ಶೃದ್ಧಾ-ಭಕ್ತಿಯಿಂದ ನಡೆಯಿತು. ಕಳೆದ 8 ವರ್ಷಗಳಿಂದ ದೇವಿಯ ಉಡಿ ತುಂಬುವ ಕಾರ್ಯದಿಂದ ನಮಗೆ ಒಳ್ಳೆಯದಾಗಿದೆ ಎಂದು ಹುಸೇನಸಾಬ ಅವರು ತಮ್ಮ ಅಭಿಪ್ರಾಯ ಹಂಚಿಕೊಂಡರು.

> ವಿಜಯದಶಮಿ ಅಂಗವಾಗಿ ಕಳೆದ 46 ವರ್ಷಗಳಿಂದ ಗ್ರಾಮದೇವತೆಯ ದಸರಾ ದರ್ಬಾರ್ ನಡೆಯುತ್ತಾ ಬಂದಿದ್ದು, ಗ್ರಾಮದ ಸರ್ವ ಸಮುದಾಯದವರು ಪಾಲ್ಗೊಳ್ಳುತ್ತಿರುವುದರಿಂದ ಇದೊಂದು ಭಾವೈಕ್ಯತೆಯ ದಸರೆಯಾಗಿದೆ.
>
> – ರಾಜು ಪಾಟೀಲ.
> ಸೇವಾ ಸಮಿತಿ ಸದಸ್ಯರು.

### ಬಾರಕೋಲ ಕುಣಿತ

ಬಜಾರ ರಸ್ತೆಯಲ್ಲಿರುವ ಮೈಲಾರ ದೇವರ ದೇವಸ್ಥಾನದ ವಿಜಯದಶಮಿಯ ಮೆರವಣಿಗೆಯ ಸಂದರ್ಭದಲ್ಲಿ ಮೈಲಾರ ದೇವರ ಭಕ್ತರು ಬಾರಕೋಲಿನಿಂದ ಹೊಡೆದುಕೊಳ್ಳುವ ದೃಶ್ಯ ರೋಮಾಂಚಕವಾಗಿತ್ತು. ಹತ್ತಾರು ಭಕ್ತರು ಜೋರಾಗಿ ಬಾರಕೋಲಿನಿಂದ ಕಾಲಿಗೆ ಹೊಡೆದುಕೊಳ್ಳುತ್ತಾ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಇದರೊಂದಿಗೆ ಪಾಲಕಿ ಉತ್ಸವಜರುಗಿತು.

# ದಸರೆಯಲ್ಲಿ ಮಿಂಚಿದ ಬೆಟಗೇರಿ ಕಲಾವಿದರು

■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ದಸರಾ ಮಹೋತ್ಸವ-2025ರ ಜಂಬೂ ಸವಾರಿ ಮೆರವಣಿಯಲ್ಲಿ ಗದಗ- ಬೆಟಗೇರಿಯ ಶ್ರೀವೀರಭದ್ರೇಶ್ವರ ಪುರವಂತಿಕೆ ಕಲಾತಂಡದವರು ಪುರವಂತಿಕೆ ಕಲಾ ಪ್ರದರ್ಶನ ನೀಡಿ ಗಮನ ಸೆಳೆದರು.

ರಾಜವಂಶಸ್ಥರು , ಮೈಸೂರು ಸಂಸದರಾದ ಯದುವೀರ ಒಡೆಯರ್, ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು ಸೇರಿದಂತೆ ಗಣ್ಯರು ಉಪಸ್ಥಿತಿಯಲ್ಲಿ ತಂಡದ ಕಲಾವಿದರಾದ ಬಸವರಾಜ ಹರ್ಲಾಪೂರ, ಗುರುನಾಥ ಕೋಡಗಂಟಿ, ವಿನಾಯಕ ಮೆಣಸಗಿ, ಮಂಜು ಬಂಕಾಪೂರ, ಉದಯ ಹಳ್ಳಿಕೇರಿ, ಪರಮೇಶ ಕನಕೇರಿ, ವೀರೇಶ ಪಲ್ಲೇದ, ಮಹಾಂತೇಶ ಬೊಬ್ಬಿ, ನವೀನ ಮೆಣಸಗಿ, ವೀರೇಶ ಚಿಪ್ಪಲಕಟ್ಟಿ, ರುದ್ರೇಶ ಇಚ್ಚಂಗಿ, ಶಿವಾನಂದ ಪಲ್ಲೇದ, ಈರಣ್ಣ ನೀಲಗುಂದ, ಮಂಜುನಾಥ ಶೆಟ್ಟಿಕೇರಿ ಪ್ರದರ್ಶನ ನೀಡಿದರು.



# ಮಕ್ಕಳಲ್ಲಿ ಶ್ರಮ ಸಂಸ್ಕೃತಿ ರೂಢಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಪಾಲಕರು ತಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಿದ ಬಳಿಕ ಅವರನ್ನು ಮನೆಯಲ್ಲಿ ಕೂರಿಸದೇ ಸಮಾಜದಲ್ಲಿ ಎಲ್ಲರೊಂದಿಗೆ ಬೆರೆಯಲು ಬಿಡಬೇಕು. ಬಸವಣ್ಣನವರ ಕಾಯಕವೇ ಕೈಲಾಸ ಎಂಬ ನಾಣ್ಣುಡಿಯಂತೆ ತಮ್ಮ ಮಕ್ಕಳಿಗೆ ಶ್ರಮ ಸಂಸ್ಕೃತಿಯನ್ನು ರೂಢಿಸಬೇಕು ಎಂದು ಶ್ರೀ ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ಸದಾಶಿವಯ್ಯ ಎಸ್. ಮದರಿಮಠ ಹೇಳಿದರು.

ನಗರದ ಮುಳಗುಂದ ನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ನಡೆದ ದಸರಾ ಮಹೋತ್ಸವದ ಧಾರ್ಮಿಕ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯುವ ಜನರು ವ್ಯಾಪಾರ, ಉದ್ಯೋಗ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆಯನ್ನು ತೋರ್ಪಡಿಸಬೇಕು. ಜೊತೆಗೆ ತಮ್ಮ ಪಾಲಕರನ್ನು ಉತ್ತಮ ರೀತಿಯಲ್ಲಿ ನೋಡಿಕೊಳ್ಳಬೇಕು. ಯುವ ಸಮುದಾಯ ಸಮಾಜದ ಮುಂಚೂಣಿಗೆ ಬಂದು ತಾವೂ ಉದ್ಯೋಗ ಮಾಡುವುದರೊಂದಿಗೆ ತಮ್ಮ ಜೊತೆ ಹಲವು ಜನರಿಗಾದರೂ ಉದ್ಯೋಗ ನೀಡುವ ಮೂಲಕ ಉದ್ಯೋಗದಾತರಾಗಿ ಸಮಾಜದಲ್ಲಿರುವ ನಿರುದ್ಯೋಗದ ಪೆಡಂಭೂತವನ್ನು ಹೊಡೆದೋಡಿಸಬೇಕು ಎಂದು ಹೇಳಿದರು. ಶ್ರೀ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖ ವಹಿಸಿದ್ದರು. ಶ್ರೀ ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ, ಡಾ. ರಾಜಗುರು ಗುರುಸ್ವಾಮಿ ಕಲಕೇರಿ, ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ, ಪೂಜಾ ಸಮಿತಿ ಅಧ್ಯಕ್ಷ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹ ಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ವೇದಿಕೆಯಲ್ಲಿದ್ದರು.

ಮಂಗಲಾ ಯಾನಮಶೆಟ್ಟಿ ಸ್ವಾಗತಿಸಿದರು. ವಿ.ಎಂ. ಕುಂದಾಳಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಯು.ಆರ್. ಭೂಸನೂರಮಠ ವಂದಿಸಿದರು.




# ಪುರಾಣ ಶ್ರವಣದಿಂದ ಪುಣ್ಯ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪುರಾಣ, ಪುಣ್ಯ ಕಥೆಗಳು ನಮ್ಮ ಬದುಕಿಗೆ ದಾರಿದೀಪವಾಗಿವೆ. ಪುರಾಣಗಳ ಶ್ರವಣದಿಂದ ಪುಣ್ಯ ಪ್ರಾಪ್ತಿಯಾಗುತ್ತದೆ. ಶ್ರದ್ಧಾಭಕ್ತಿಗಳಿಂದ ಪುರಾಣ ಆಲಿಸಿದರೆ ಜನ್ಮಜನ್ಮಾಂತರದ ಪಾಪಗಳು ನಾಶವಾಗುತ್ತವೆ ಎಂದು ಹಿರಿಯರು ಹೇಳುತ್ತಾರೆ. ಆದ್ದರಿಂದ ಪುರಾಣ ಕೇಳುವಾಗ ಶ್ರದ್ಧಾ-ಭಕ್ತಿಯನ್ನು ಹೊಂದಿರಬೇಕೆಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ಗ್ರಾಮದೇವತಾ ದೇವಸ್ಥಾನದಲ್ಲಿ ನಡೆಯುತ್ತಿರುವ ಶ್ರೀ ದೇವಿ ಪುರಾಣದ ಸಂದರ್ಭದಲ್ಲಿ ಅವರು ಮಾತನಾಡಿದರು.

ದೇವಿ ಪುರಾಣವು ಮುಖ್ಯವಾಗಿ ಮನುಷ್ಯ ಅಹಂಕಾರದಿಂದ ವರ್ತಿಸಿದರೆ ಹೇಗೆ ನಾಶವಾಗುತ್ತಾನೆ ಎಂಬುದನ್ನು ತಿಳಿಸಿಕೊಡುತ್ತದೆ. ನಮ್ಮಲ್ಲಿರುವ ಅರಿಷಡ್ವರ್ಗಗಳೇ ಈಗಿನ ಕಾಲದ ಅಸುರರಾಗಿದ್ದಾರೆ. ಈ ಅಸುರರ ಸಂಹಾರವಾಗಬೇಕಿದ್ದರೆ ಇಂತಹ ಪುರಾಣಗಳ ಶ್ರವಣದಲ್ಲಿ ಪಾಲ್ಗೊಳ್ಳಬೇಕೆಂದು ಕುಲಕರ್ಣಿ ತಿಳಿಸಿದರು.

ಸುರರು ಎಂದರೆ ದೇವತೆಗಳು, ಅಸುರರು ಎಂದರೆ ರಾಕ್ಷಸರು ಎಂದು ಹೇಳುತ್ತಾರೆ. ನಮ್ಮಲ್ಲಿನ ಉತ್ತಮ ಗುಣಗಳೆ ಸುರರಾದರೆ, ದುರ್ಗುಣಗಳನ್ನು ಅಸುರರೆಂದು ಕರೆಯಬಹುದು. ನಾವು ಅಸುರತ್ವವನ್ನು ಬಿಟ್ಟು ಸುರತ್ವದ ಕಡೆಗೆ ಬರಬೇಕೆಂದರೆ ನಮ್ಮಲ್ಲಿ ಜೀವನ ಮೌಲ್ಯಗಳು ಅಡಕವಾಗಬೇಕು. ಅದಕ್ಕೆ ಸತ್ಸಂಗದ ಅವಶ್ಯಕತೆ ಇದೆ. ಇಂತಹ ಪುರಾಣ, ಪ್ರವಚನಗಳನ್ನು ಕೇಳುತ್ತಿದ್ದರೆ ನಮಗೆ ಸತ್ಸಂಗದ ಅನುಭವವಾಗಿ ನಮ್ಮಲ್ಲಿನ ಅಸುರೀ ಗುಣ ನಾಶವಾಗುತ್ತದೆ ಎಂದು ಹೇಳಿದರು. ವೇ.ಮೂ. ಶಂಭುಲಿಂಗ ಶಾಸ್ತ್ರಿಗಳು ಪುರಾಣದ ವಿವರಣೆ ನೀಡಿದರು. ವಿಜಯಕುಮಾರ ಅಂಗಡಿ ಪುರಾಣವನ್ನು ಓದಿದರು. ಮಹೇಶ ಬಡಿಗೇರ ಮತ್ತು ನಾಗರಾಜ ಪೂಜಾರ ಸಂಗೀತ ಸೇವೆ ನೀಡಿದರು. ನರೇಗಲ್ಲ ಪಟ್ಟಣ ಮತ್ತು ಮಜಿರೆ ಗ್ರಾಮಗಳ ಸದ್ಭಕ್ತರು ಪಾಲ್ಗೊಂಡಿದ್ದರು.



## ಹಿರಿಯ ನಾಗರಿಕ ಎಸ್.ಕೆ. ಪಾಟೀಲರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗದುಗಿನ ಜಿಲ್ಲಾಡಳಿತ ಭವನದಲ್ಲಿ ಜರುಗಿದ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯಲ್ಲಿ ನರೇಗಲ್ಲ ಸರಕಾರಿ ನಿವೃತ್ತ ನೌಕರರ ಸಂಘದ ಸದಸ್ಯ ಎಸ್.ಕೆ. ಪಾಟೀಲರನ್ನು ಸನ್ಮಾನಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಿಕಲ ಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರುಗಳ ಸಹಯೋಗದಲ್ಲಿ ನಡೆದ ಸಮಾರಂಭದಲ್ಲಿ 81 ವರ್ಷದ ಎಸ್.ಕೆ. ಪಾಟೀಲರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸನ್ಮಾನಿಸಿ, ಗೌರವಿಸಿದರು. ಹಿರಿಯ ನಾಗರಿಕರು ನಮ್ಮ ದೇಶದ ಆಸ್ತಿ. ಅವರು ನಮ್ಮ ಆಶೋತ್ತರಗಳು ಮತ್ತು ಹಕ್ಕುಗಳನ್ನು ಸ್ಥಳೀಯ ಮತ್ತು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಬಲ್ಲಷ್ಟು ಸಶಕ್ತರು. ಅವರನ್ನು ಕಾಪಾಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಸಚಿವರು ನುಡಿದರು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗ್ಯಾರಂಟಿ ಯೋಜನೆ ಅನುಷ್ಠಾನದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಎಸ್ಪಿ ರೋಹನ್ ಜಗದೀಶ, ಹಿರಿಯ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡ, ನರೇಗಲ್ಲ ಘಟಕದ ಅಧ್ಯಕ್ಷ ಡಿ.ಎ. ಅರವಟಗಿಮಠ, ನಿಕಟಪೂರ್ವ ಅಧ್ಯಕ್ಷ ಡಾ. ಆರ್.ಕೆ. ಗಚ್ಚಿನಮಠ ಮುಂತಾದವರು ಉಪಸ್ಥಿತರಿದ್ದರು.

# ಬನ್ನಿ ಮುಡಿಯುವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಹಿರೇಬಣದಲ್ಲಿರುವ ಶ್ರೀ ವೆಂಕಟೇಶ್ವರ ದೇವಸ್ಥಾನ ಹಾಗೂ ಲಕ್ಷ್ಮಣಲಿಂಗ ದೇವಸ್ಥಾನಗಳ ಭಕ್ತರು ಒಂದೆಡೆ ಸೇರಿ ಬನ್ನಿ ಮುಡಿಯವ ಕಾರ್ಯಕ್ರಮವನ್ನು ಸಂಪ್ರದಾಯದಂತೆ ನೆರವೇರಿಸಿದರು.

ಗುರುವಾರ ಸಂಜೆ ವೆಂಕಟೇಶ್ವರ ದೇವಸ್ಥಾನದ ಸಮೀಪದದಲ್ಲಿರುವ ಲಕ್ಷ್ಮಣಲಿಂಗ ದೇವಸ್ಥಾನದ ಹತ್ತಿರ ಬನ್ನಿ ಮುಡಿಯುವ ಕಾರ್ಯಕ್ರಮವನ್ನು ನೆರವೇರಿಸಲಾಯಿತು. ತಲೆ ತಲಾಂತರದಿಂದ ಈ ದೇವಸ್ಥಾನದ ಶರನ್ನವರಾತ್ರಿ ಪೂಜೆಯಲ್ಲಿ ಹುಲಗೇರಿಬಣದಲ್ಲಿರುವ ಪಾಟೀಲಕುಲಕರ್ಣಿಯವರ ಮನೆತನದವರು ಪೂಜೆ ಸಲ್ಲಿಸುವ ಪದ್ಧತಿ ಇದ್ದು, ಅದರಂತೆ ಕುಟುಂಬದ ನಾರಾಯಣ ಪಾಟೀಲಕುಲಕರ್ಣಿ ಶಮಿ ವೃಕ್ಷಕ್ಕೆ ಪೂಜೆ ಸಲ್ಲಿಸಿ ಬನ್ನಿ ಮುಡಿಯುವ ಕಾರ್ಯಕ್ಕೆ ಚಾಲನೆ ನೀಡಿದರು.

ಶಮಿ ವೃಕ್ಷಕ್ಕೆ ಪೂಜೆ ಸಲ್ಲಿಸುವ ಸಂದರ್ಭದಲ್ಲಿ ಶ್ರೀ ವೆಂಕಟೇಶ್ವರ ದೇವರ ಹಾಗೂ ಲಕ್ಷ್ಮಣಲಿಂಗ ದೇವರ ಪಲ್ಲಕ್ಕಿಗಳು ಆಗಮಿಸಿ ಎರಡೂ ದೇವರಿಗೂ ಶಮಿ ವೃಕ್ಷದ ಬಳಿ ಪೂಜೆ ಸಲ್ಲಿಸಿ ನಂತರ ಪ್ರದಕ್ಷಿಣೆ ಹಾಕಿ ನೂರಾರು ವರ್ಷಗಳ ಪುರಾತನವಾದ ಖಡ್ಗದಿಂದ ಬನ್ನಿ ಮುಡಿಯುವ ಕಾರ್ಯವನ್ನು ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ನಾರಾಯಣ ಪಾಟೀಲ ಕುಲಕರ್ಣಿ, ಗುರುರಾಜ ಪಾಟೀಲಕುಲಕರ್ಣಿ, ಅರ್ಚಕರಾದ ವೆಂಕಟೇಶ ಗುಡಿ, ಶ್ರೀಕಾಂತ ಪೂಜಾರ, ದತ್ತಾತ್ರೇಯ ಪಾಟೀಲ ಕುಲಕರ್ಣಿ, ಗೋಪಾಲ ಪಡ್ನಿಸ್, ಪಲ್ಲಣ್ಣನವರು ಕುಲಕರ್ಣಿ, ಅರವಿಂದ ದೇಶಪಾಂಡೆ, ಅನಂತಭಟ್ ಪೂಜಾರ, ಚಿಕ್ಕರಸ ಪೂಜಾರ, ದ್ಯಾಮನಗೌಡ ಪಾಟೀಲ, ಸೇರಿದಂತೆ ಅನೇಕರಿದ್ದರು.

ಗುರುವಾರ ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಎಲ್ಲ ದೇವಸ್ಥಾನಗಳಲ್ಲಿ ಬನ್ನಿಮುಡಿಯುವ ಕಾರ್ಯಕ್ರಮಗಳು ನೆರವೇರಿದವು. ಪಟ್ಟಣದ ಐತಿಹಾಸಿಕ ಪ್ರಸಿದ್ಧ ಸೋಮೇಶ್ವರ ದೇವಸ್ಥಾನ, ಮೈಲಾರಲಿಂಗೇಶ್ವರ, ವೀರಭದ್ರೇಶ್ವರ, ದ್ಯಾಮವ್ವದೇವಿ, ಅಡರಕಟ್ಟಿ ದ್ಯಾಮವ್ವ ದೇವಸ್ಥಾನ ಸೇರಿದಂತೆ ಎಲ್ಲ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಪುರಾಣ ಮಂಗಲ, ಬನ್ನಿ ವಿನಿಮಯ ಕಾರ್ಯಕ್ರಮಗಳು ನಡೆದವು.



## ಶಾಸಕ ಜಿ.ಎಸ್.ಪಾಟೀಲ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಡಂಬಳ



ರೋಣ ಶಾಸಕರು ಹಾಗೂ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರೂ ಆದ ಜಿ.ಎಸ್.ಪಾಟೀಲ ಅವರು ಗದಗ ಜಿಲ್ಲೆಯಲ್ಲಿ ಅಕ್ಟೋಬರ್ 4 ರಂದು ಪ್ರವಾಸ ಕೈಗೊಳ್ಳಲಿದ್ದು, ಪ್ರವಾಸ ವಿವರ ಇಂತಿದೆ.

ಅ.4 ರಂದು ಮಧ್ಯಾಹ್ನ 12 ಗಂಟೆಗೆ ತಿಮ್ಮಾಪೂರ ಗ್ರಾಮದಲ್ಲಿ ಆರೋಗ್ಯ ಮತ್ತು ಕ್ಷೇಮ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ, ನಂತರ ಗ್ರಂಥಾಲಯ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಮದ್ಯಾಹ್ನ 3ಗಂಟೆಗೆ ಹಳ್ಳಿಕೇರಿ ಗ್ರಾಮದ ಕವಲೂರ ರಸ್ತೆಯಲ್ಲಿನ ಸೇತುವೆ ಕಟ್ಟಡ ಕಾಮಗಾರಿಗೆ ಭೂಮಿ ಪೂಜೆ ಹಾಗೂ ಗ್ರಾಮದ ಅಗಸಿ ಬಾಗಿಲ ಕಟ್ಟಡದ ಭೂಮಿ ಪೂಜೆ ಸೇರಿದಂತೆ ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿವರು.

ಸಂಜೆ 5 ಗಂಟೆಗೆ ಡ.ಸ. ರಾಮನೇಹಳ್ಳಿಯಲ್ಲಿ ಮುಖ್ಯ ರಸ್ತೆಯಿಂದ ಮಾರುತಿ ದೇವಸ್ಥಾನದವರೆಗೆ ನಿರ್ಮಾಣವಾಗುವ ಸಿ ಸಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ನಂತರ ಕೃಷಿ ಇಲಾಖೆಯಿಂದ ನೀಡುವ ಹಿಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರೆಂದು ಪ್ರಕಟಣೆ ತಿಳಿಸಿದೆ.

**ಕುಸಿತ ಕಂಡ ಈರುಳ್ಳಿ ಬೆಲೆ । ಬೆಂಬಲ ಬೆಲೆಯಲ್ಲಿ ಖರೀದಿಗೆ ಒತ್ತಾಯ**

# ಆರ್ಥಿಕ ಸಂಕಷ್ಟದಲ್ಲಿ ಈರುಳ್ಳಿ ಬೆಳೆಗಾರರು

■ವಿಜಯಸಾಕ್ಷಿ ಸುದ್ದಿ, ಡಂಬಳ

ಹವಾಮಾನ ವೈಪರಿತ್ಯ, ನಿರಂತರ ಮಳೆಯಿಂದಾಗಿ ಈರುಳ್ಳಿ ಇಳುವರಿ ಕುಂಠಿತವಾಗಿದ್ದಷ್ಟೇ ಅಲ್ಲದೆ, ಇದೀಗ ದರ ಕುಸಿತದಿಂದ ಬೆಳೆಗಾರರನ್ನು ಅಕ್ಷರಶಃ ಆರ್ಥಿಕ ಸಂಕಷ್ಟಕ್ಕೆ ದೂಡಿದೆ. ಡಂಬಳ ಸೇರಿದಂತೆ ತಾಲೂಕಿನ ಡೋಣಿ, ಡೋಣಿ ತಾಂಡ, ಅತ್ತಿಕಟ್ಟಿ, ಮುರಡಿ ತಾಂಡ, ಕದಾಂಪುರ ಮುಂತಾದ ಕಡೆಗಳಲ್ಲಿ ಮುಂಗಾರು ಹಂಗಾಮಿನಲ್ಲಿ ನೂರಾರು ಹೆಕ್ಟೇರ್ ಪ್ರದೇಶದಲ್ಲಿ ಈರುಳ್ಳಿ ಬೆಳೆಯಲಾಗಿದೆ.

ಡಂಬಳ ಸುತ್ತಮುತ್ತ ರೆಡ್ ಈರುಳ್ಳಿ ಎಂದು ಕರೆಯುವ ಸ್ಥಳೀಯ ತಳಿಯ ಈರುಳ್ಳಿ ಬೆಳೆಯಲಾಗುತ್ತದೆ. ಇಲ್ಲಿ ಬೆಳೆಯುವ ಈರುಳ್ಳಿ ಗಾತ್ರದಲ್ಲಿ ಸ್ವಲ್ಪ ದೊಡ್ಡದು ಮತ್ತು ಚಿಕ್ಕದಾಗಿದ್ದರೂ ಕೂಡಾ ರುಚಿಗೆ ಹೆಸರಾಗಿದೆ. ಜೂನ್ ಅಥವಾ ಜುಲೈ ತಿಂಗಳಲ್ಲಿ ನಾಟಿ ಮಾಡಿ ಅಗಸ್ಟ್-ಸಪ್ಟೆಂಬರ್, ಅಕ್ಟೋಬರ್‌ನಲ್ಲಿ ಬೆಳೆ ಕಟಾವು ಮಾಡಲಾಗುತ್ತದೆ.

ಇದೀಗ ಈರುಳ್ಳಿ ಬೆಲೆ 600ರಿಂದ 1000 ರೂ.ಗೆ ಕುಸಿದಿದೆ. ಈರುಳ್ಳಿ ಬೆಳೆದ ರೈತರು, ಉತ್ತಮ ಬೆಲೆ ದೊರೆಯಬಹುದೆಂಬ ನಿರೀಕ್ಷೆಯಲ್ಲಿ ತಾವು



ಬೆಳೆದ ಈರುಳ್ಳಿಯನ್ನು ತಮ್ಮ ಹೊಲಗಳಲ್ಲಿಯೇ ಕಿತ್ತು ಹಾಕಿದ್ದರೆ, ಕೆಲ ರೈತರು ಈರುಳ್ಳಿ ಕೊಯಿಲು ಮಾಡಿ ತಂದು ಮಾರಾಟಕ್ಕೆ ಸಿದ್ಧಪಡಿಸುತ್ತಿದ್ದಾರೆ. ಆದರೆ, ಬೆಳೆಯನ್ನು ಮಾರುಕಟ್ಟೆಗೆ ಒಯ್ದರೆ ಬೆಲೆ ಕುಸಿತದಿಂದ ಕಂಗಾಲಾಗುವಂತಾಗಿದೆ. ರೈತರಿಗೆ ನ್ಯಾಯ ನೀಡುವಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಂಪೂರ್ಣ ವಿಫಲವಾಗುತ್ತಿರುವುದರಿಂದ ಕೆಲ ರೈತರು ಬೆಲೆ ಬರುವುದಿಲ್ಲ ಎಂದು ಟ್ರ್ಯಾಕ್ಟರ್ ಮೂಲಕ ರೂಟರ್ ಹೊಡೆಯಲು ಮುಂದಾಗಿದ್ದು, ಈರುಳ್ಳಿ ಬೆಳೆ ಮಣ್ಣು ಸೇರುವ ಸಂದರ್ಭ ಎದುರಾಗಿದೆ.

ಮಾರುಕಟ್ಟೆಯಲ್ಲಿ ಕೆಜಿ ಈರುಳ್ಳಿಯನ್ನು ಮಾರಾಟಗಾರರು 25-30 ರೂ.ಗಳಂತೆ ಮಾರಾಟ ಮಾಡುತ್ತಿದ್ದಾರೆ. ಆದರೆ ಈ ಬೆಲೆ ಮಾತ್ರ ಬೆಳೆದ ರೈತರಿಗೆ ಸಿಗುತ್ತಿಲ್ಲ. ರೈತರು ಬೆಳೆದ ಈರುಳ್ಳಿ ಕ್ವಿಂಟಲ್‌ಗೆ 600ರಿಂದ 1000 ರೂ.ಗೆ ಕೇಳುತ್ತಿರುವುದರಿಂದ ರೈತರು ತೊಂದರೆ ಅನುಭವಿಸುವಂತಾಗಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರ ಶೀಘ್ರವಾಗಿ ಈರುಳ್ಳಿ ಬೆಳೆಗೆ ಬೆಂಬಲ ಬೆಲೆ ಘೋಷಣೆ ಮಾಡಿ ಖರೀದಿಗೆ ಮುಂದಾಗಿ, ರೈತರು ಕಣ್ಣೀರು ಒರೆಸುವ ಕೆಲಸ ಮಾಡಬೇಕಿದೆ. ರೈತರ ಆರ್ಥಿಕ ಸಂಕಷ್ಟವನ್ನು ತಡೆಯುವ ಕಾರ್ಯಕ್ಕೆ ಸರ್ಕಾರಗಳು ಮುಂದಾಗಬೇಕು ಎನ್ನುತ್ತಾರೆ ಡಂಬಳ ಹೋಬಳಿಯ ಈರುಳ್ಳಿ ಬೆಳೆಗಾರರು.

> ಲಕ್ಷಾಂತರ ರೂ ಸಾಲ ಮಾಡಿ ರೈತರು ಈರುಳ್ಳಿ ಬೆಳೆದಿದ್ದು, ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಸಿಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ಅತಿ ಶೀಘ್ರವಾಗಿ ಬೆಂಬಲ ಬೆಲೆಯಲ್ಲಿ ಈರುಳ್ಳಿ ಖರೀದಿಸಬೇಕು. ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ರೈತರ ಮಾಡಿರುವ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು.
>
> **- ವಾಯ್.ಎನ್. ಗೌಡರ.**
> **ಸಾಮಾಜಿಕ ಹೋರಾಟಗಾರರು,**
> **ಮುಂಡರಗಿ.**

## ಅಲಗಿಲವಾಡದಲ್ಲಿ ಬಾಪು, ಶಾಸ್ತ್ರೀಜಿ ಜಯಂತಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ ಮಹಾತ್ಮ ಗಾಂಧಿ ಜಯಂತಿ ಹಾಗೂ ಲಾಲ್ ಬಹಾದ್ದೂರ ಶಾಸ್ತ್ರೀಜಿಯವರ ಜನ್ಮ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಶಿಕ್ಷಕ ನೇಮೇಶ ಯರಗುಪ್ಪಿ ಮಾತನಾಡಿ, ಈ ಶಾಲೆಗೆ ಹಾಜರಾಗಿ ಒಂದು ವರ್ಷ ಪೂರೈಸಿದ್ದು, ಗ್ರಾಮದ ಗುರು-ಹಿರಿಯರ, ಪಾಲಕರ, ಪ್ರಧಾನ ಗುರುಗಳ ಸಹಕಾರ ನನಗೆ ಬಹಳ ಸಂತೋಷ ತಂದಿದೆ. ಇನ್ನಷ್ಟು ದಕ್ಷತೆಯಿಂದ ಕರ್ತವ್ಯ ನಿರ್ವಹಿಸಲು ಶಕ್ತಿ ನೀಡಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಧಾನ ಗುರುಗಳಾದ ಹಾಲೇಶ ಜಕ್ಕಲಿ, ಶಿಕ್ಷಣ ಪ್ರೇಮಿಗಳಾದ ಅಕ್ಬರಸಾಬ ಟಪಾಲನವರ, ನಿಜಲಿಂಗಪ್ಪ ಮಾಯಕಾರ, ಗ್ರಾಮದ ಗುರು-ಹಿರಿಯರು, ಮಕ್ಕಳು ಹಾಜರಿದ್ದರು.

## ಗಾಂಧೀಜಿಯವರ ಅಹಿಂಸಾ ತತ್ವಗಳನ್ನು ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ ಕಾನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಜಯಂತಿಯನ್ನು ಗುರುವಾರ ಆಚರಿಸಲಾಯಿತು.

ಕೆಪಿಸಿಸಿ ಉಪಾಧ್ಯಕ್ಷ ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಅಹಿಂಸಾ ತತ್ವಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡು ಮುನ್ನಡೆ ಸಾಧಿಸಬೇಕು ಎಂದು ಹೇಳಿದರು.

ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ,



ಗದಗ ಜಿಲ್ಲಾ ಪ.ಜಾ ಕಾಂಗ್ರೆಸ್ ವಿಭಾಗದ ಅಧ್ಯಕ್ಷ ಬಸವರಾಜ ಕಡೆಮನಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಗದಗ-ಬೆಟಗೇರಿ ನಗರಸಭೆ ಮಾಜಿ ಅಧ್ಯಕ್ಷ ಪ್ರಕಾಶ ಬೊಮ್ಮನಹಳ್ಳಿ, ತಾ.ಪಂ ಮಾಜಿ ಅಧ್ಯಕ್ಷ ವಿದ್ಯಾಧರ ದೊಡ್ಡಮನಿ, ಡಾ. ಅರವಿಂದ ಪಾಟೀಲ, ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಸಾವಿತ್ರಿ ಹೂಗಾರ, ಗದಗ-ಬೆಟಗೇರಿ ಆಶ್ರಯ ಸಮಿತಿ ಸದಸ್ಯರಾದ ರೇಖಾ ಜಡಿ, ಮುಖಂಡರಾದ ಚಾಂದಸಾಬ್ ಕೊಟ್ಟೂರ, ಶಿವರಾಜ ಕೋಟಿ, ಸಮೀರ ಕೊಟ್ಟೂರ ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿ ಅವರು ನಿರ್ವಹಿಸಿದರು.

**ಸುಕ್ಷೇತ್ರ ಸಿದ್ದನಕೊಳ್ಳದಲ್ಲಿ 'ಗೀತಕುಸುಮ' ವಿಡಿಯೋ ಆಲ್ಬಂ ಬಿಡುಗಡೆ**

# ಸಿದ್ದನಕೊಳ್ಳ ಕಲಾ ಪೋಷಕ ಮಠವಾಗಿದೆ

■ವಿಜಯಸಾಕ್ಷಿ ಸುದ್ದಿ, ಇಲಕಲ್

ತಾಲೂಕಿನ ನಿರಂತರ ಅನ್ನ ದಾಸೋಹ ಹಾಗೂ ಕಲಾ ಪೋಷಕರ ಮಠ, ಸುಕ್ಷೇತ್ರ ಸಿದ್ದನಕೊಳ್ಳದ ಸಿದ್ದಪ್ಪಜ್ಜನ ಮಠದಲ್ಲಿ ದಸರಾ ಮಹೋತ್ಸವ ಅಂಗವಾಗಿ ಕಲಾಪೋಷಕ ಮಠ ಸಿದ್ದನಕೊಳ್ಳ ಅರ್ಪಿಸುವ 'ಗೀತ ಕುಸುಮ-ಕುಂದದ ಸುಮಧುರ ಮನಸುಗಳು' ಎಂಬ ಭಾವಗೀತೆಗಳ ವಿಡಿಯೋ ಆಲ್ಬಂ ಬಿಡುಗಡೆ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಕಸಾಪ ಗೋವಾ ರಾಜ್ಯಾಧ್ಯಕ್ಷ ಸಿದ್ದಣ್ಣ ಮೇಟಿ, ಲಿಂಗಸೂರಿನ ಅಯ್ಯಣ್ಣಸ್ವಾಮಿ ಗಣಾಚಾರಿ, ಸಿನಿಮಾ ಪತ್ರಕರ್ತ ಡಾ. ಪ್ರಭು ಗಂಜಿಹಾಳ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಅಮೀನಗಡದ ಸಾಹಿತಿಗಳು ಹಾಗೂ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಮಹದೇವ ಬಸರಕೋಡ ವಹಿಸಿದ್ದರು. ಸಿದ್ದನಕೊಳ್ಳ ಶ್ರೀಮಠದ ಧರ್ಮಾಧಿಕಾರಿಗಳಾದ ಡಾ. ಶಿವಕುಮಾರ ಮಹಾಸ್ವಾಮಿಗಳು ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿ, ಸಿದ್ದನಕೊಳ್ಳ ಮಠ ಕಲಾವಿದರನ್ನು ಬೆಳೆಸಿದ ಮತ್ತು ಬೆಳೆಸುವ ಕಲಾ ಪೋಷಕಮಠವಾಗಿದೆ. ಕಲಾಪ್ರತಿಭೆಗಳಿಗೆ ಇಲ್ಲಿ ಪ್ರೋತ್ಸಾಹ ಸದಾ ಇದೆ ಎಂದರು.


ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಬಸರಕೋಡ ಮಾತನಾಡಿ, ಕಲಾವಿದರು ಗೀತೆಗಳಿಗೆ ಭಾವಪೂರ್ಣ ಅಭಿನಯವನ್ನು ನೀಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



> 'ಮೂರು ದಿನದ ಬಾಳಿಗೆ' ಎಂಬ ಭಾವಗೀತೆಗೆ ಶ್ರೀಗಳು ಭಾವಪೂರ್ಣ ಅಭಿನಯ ನೀಡಿದ್ದು, ಅಯ್ಯಣ್ಣಸ್ವಾಮಿ, ಪಾರ್ವತಿ ಗಣಾಚಾರಿ, ಭಾವನಾ, ಬೇಬಿ ಸಹನಾ, ಬೇಬಿ ಶ್ರೇಯಾ, ಮಾಸ್ಟರ್ ವೀರೇಶ್ ಅಭಿನಯಿಸಿದ್ದಾರೆ. ಇನ್ನೊಂದು ಭಾವಗೀತೆಗೆ ಚಿತ್ರನಟಿ ಅಪ್ಪು ಮಂಜು, ಮೂರನೇ ಗೀತೆಗೆ ಎಚ್.ವಿಜಯಲಕ್ಷ್ಮೀ (ಖುಷಿ) ಮತ್ತು ಗುರು ರಾಠೋಡ ನಟಿಸಿದ್ದಾರೆ.

ಸಾಹಿತ್ಯವನ್ನು ಮಹದೇವ ಬಸರಕೋಡ ರಚಿಸಿದ್ದು, ಸಂಗೀತವನ್ನು ರಾಜೂ ಎಮ್ಮಿಗನೂರ ನೀಡಿದ್ದಾರೆ. ಮಾಲಾಶ್ರೀ ಕಣವಿ ಮತ್ತು ರವೀಂದ್ರ ಸೊರೆಗಾವಿ ಸುಮಧುರವಾಗಿ ಹಾಡಿದ್ದಾರೆ. ರಾಜೇಶ್ ಪವಾರ ಛಾಯಾಗ್ರಹಣ, ವಿನಾಯಕ ಬಸವಾ ನೃತ್ಯ ನಿರ್ದೇಶನ, ಸಿದ್ದಾರ್ಥ್ ಜಾಲಿಹಾಳ ಸಂಕಲನ, ದೇವು ಕಮ್ಮಾರ ಪ್ರಸಾಧನ, ನಟರಾಜ ಪತ್ತಾರ ಡಿಸೈನ್, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಪತ್ರಿಕಾ ಸಂಪರ್ಕ, ನಿಖಿಲ್ ಬೇಲೂರು ಮಠ, ದುರ್ಗಾದೇವಿ ಜಿ.ಎಚ್, ಗಣೇಶ ಜಾಧವ್, ರಾಜಪ್ಪ ಗಜೇಂದ್ರಗಡ ಸಹಕಾರವಿದೆ. ಧಾರವಾಡ ಸಮೀಪದ ಮುಗದಕೆರೆ ಸುತ್ತ-ಮುತ್ತ, ಡೋರಿಕೆರೆ, ಹುಲಿಕೇರಿ ಸುಂದರ ಸ್ಥಳಗಳಲ್ಲಿ ಚಿತ್ರೀಕರಣ ಮಾಡಲಾಗಿದ್ದು, ಮಹಾಮಹಿಮ ಲಡ್ಡುಮುತ್ಯಾ ಚಲನಚಿತ್ರ ಖ್ಯಾತಿಯ ಅರವಿಂದ ಮುಳಗುಂದ ನಿರ್ದೇಶನವನ್ನು ಮಾಡಿದ್ದಾರೆ. ಇದೇ ಸಂದರ್ಭದಲ್ಲಿ ಭಕ್ತಿಗೀತೆಗಳ ರಸಮಂಜರಿ ಜರುಗಿ-ತು. ಚಿತ್ರನಟ, ಜ್ಯೂ. ಉಪೇಂದ್ರ ವೀರೇಶ ಪುರವಂತ, ಸೌಮ್ಯ ಬಿಜಾಪುರ, ಸುಮಾ ಹಿರೇಮಠ, ಮಲ್ಲು ಅಮೀನಗಡ, ಸಂಗನಗೌಡ ಕುರುಡಗಿ ಹಾಡುಗಳನ್ನು ಹಾಡಿದರು. ಕಾರ್ಯಕ್ರಮದಲ್ಲಿ ಶ್ರೀಮಠದ ಸಂಗಮೇಶ ಹುದ್ದಾರ ಸೇರಿದಂತೆ ಕಲಾವಿದರು, ತಂತ್ರಜ್ಞರು, ಶ್ರೀಮಠದ ಸದ್ಭಕ್ತರು ಪಾಲ್ಗೊಂಡಿದ್ದರು.

## ಗಾಂಧೀಜಿಯವರ ತತ್ವಾದರ್ಶ ಮೈಗೂಡಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಾತ್ಮ ಗಾಂಧೀಜಿ ಅವರ ಜೀವನ, ತತ್ವಾದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಪ.ಪಂ ಸದಸ್ಯ ಕೆ.ಎಲ್. ಕರಿಗೌಡರ ಹೇಳಿದರು.

ಅವರು ಪಟ್ಟಣದ ಮಾರುಕಟ್ಟೆಯಲ್ಲಿ ಗಾಂಧೀಜಿ ಜಯಂತಿ ಅಂಗವಾಗಿ ಗಾಂಧಿ ಪುತ್ಥಳಿ ಪ್ರತಿಷ್ಠಾಪಿಸಿ ಮಾತನಾಡಿ, ಸ್ವಾತಂತ್ರ್ಯಕ್ಕಾಗಿ ಬ್ರಿಟಿಷರ ವಿರುದ್ಧ ಹೋರಾಡಿ ಗಾಂಧೀಜಿಯವರ ಅಹಿಂಸಾತ್ಮಕ ಚಳುವಳಿ, ಶಾಂತಿಯುತ ಹೋರಾಟ ಅವಿಸ್ಮರಣೀಯವಾದದ್ದು. ಅವರು ತಮ್ಮ ಜೀವನದುದ್ದಕ್ಕೂ ಸ್ವಚ್ಛತೆ, ಶಾಂತಿ, ಅಹಿಂಸಾ ತತ್ವಗಳನ್ನು ಪಾಲಿಸಿದವರು. ಅಂತಹ ಮಹನೀಯರ ತತ್ವಾದರ್ಶಗಳು ನಮಗೆ ಮಾದರಿಯಾಗಿದ್ದು, ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗೋಣ ಎಂದರು.

ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಬಸವರಾಜ ಬಡ್ನಿ, ಪಿ.ಎ. ವಂಟಕರ, ಅಶೋಕ ಸೋನಗೋಜಿ, ಬಿ.ವಿ. ಸುಂಕಾಪೂರ, ರಾಮಣ್ಣಾ ಕಮಾಜಿ, ಮಾಹಾದೇವಪ್ಪ ವಿಜಾಪೂರ, ನಾಗರಾಜ ದೇಶಪಾಂಡೆ, ಬಸವರಾಜ ಹಾರೋಗೇರಿ, ಉಮಾ ಮಟ್ಟಿ, ಪಾರವ್ವ ಅಳ್ಳಣ್ಣವರ, ಮರಿಯಪ್ಪ ನಡಗೇರಿ, ಮಾಹಾದೇವಪ್ಪ ಗಡಾದ ಹಾಗೂ ಪ.ಪಂ ಸರ್ವ ಸದಸ್ಯರು ಇದ್ದರು.



ಗದುಗಿನ ಶ್ರೀ ಜ.ಶಿವಾನಂದ ಪದವಿ ಪೂರ್ವ ವಿಜ್ಞಾನ ಕಾಲೇಜಿನಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ ಶಾಸ್ತ್ರೀಜಿಯವರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು. ಪ್ರಾಚಾರ್ಯ ಎಸ್.ವ್ಹಿ. ವೆರ್ಣೇಕರ ಮಾತನಾಡಿ, ಇಂದಿನ ವಿದ್ಯಾರ್ಥಿಗಳು ಮುಂದಿನ ಸತ್ಪ್ರಜೆಗಳಾಗಿ ದೇಶಕ್ಕೆ ತಮ್ಮ ಅಮೂಲ್ಯವಾದ ಕೊಡುಗೆಯನ್ನು ನೀಡಬೇಕೆಂಬ ಬಯಕೆ ಸದಾ ನಿಮ್ಮಲ್ಲಿ ಜಾಗೃತವಾಗಿರಲಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಸರ್ವ ಸಿಬ್ಬಂದಿಯವರು ಉಪಸ್ಥಿತರಿದ್ದರು.

## ಪದ್ಮಭೂಷಣ ಪುರಸ್ಕೃತ ಖ್ಯಾತ ಪತ್ರಕರ್ತ ಟಿಜೆಎಸ್ ಜಾರ್ಜ್ ನಿಧನ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೆಲ ದಿನಗಳಿಂದ ಅನಾರೋಗ್ಯಕ್ಕೆ ಒಳಗಾಗಿದ್ದ ಖ್ಯಾತ ಪತ್ರಕರ್ತ, ಲೇಖಕ ಮತ್ತು ಅಂಕಣಕಾರರಾಗಿದ್ದ ಟಿಜೆಎಸ್ ಜಾರ್ಜ್ ಅವರು ವಿಧಿವಶರಾಗಿದ್ದಾರೆ.

ಥೈಲ್ ಜಾಕೋಬ್ ಸೋನಿ ಜಾರ್ಜ್ ಅವರ ನಿಧನಕ್ಕೆ ಸಿಎಂ ಸಿದ್ದರಾಮಯ್ಯ ಸೇರಿದಂತೆ ಹಲವರು ಕಂಬನಿ ಮಿಡಿದಿದ್ದಾರೆ. ಥೈಲ್ ಜಾಕೋಬ್ ಸೋನಿ ಜಾರ್ಜ್ ಅವರು ಟಿಜೆಎಸ್ ಜಾರ್ಜ್ ಎಂದೇ ಖ್ಯಾತರಾಗಿದ್ದರು. 1928 ಮೇ 7 ರಂದು ಕೇರಳದಲ್ಲಿ ಜನಿಸಿದ್ದ ಇವರು, ಮದ್ರಾಸ್ ಕ್ರಿಶ್ಚಿಯನ್ ಕಾಲೇಜಿನಿಂದ ಇಂಗ್ಲಿಷ್ ಸಾಹಿತ್ಯದಲ್ಲಿ ಪದವಿ ಪಡೆದುಕೊಂಡಿದ್ದರು. ನಂತರ ಮುಂಬೈನ ಫ್ರೀ ಪ್ರೆಸ್ ಜರ್ನಲ್‌ನಲ್ಲಿ ವೃತ್ತಿ ಜೀವನವನ್ನು ಆರಂಭಿಸಿದ್ದರು. ಭಾರತೀಯ ಪತ್ರಿಕೋದ್ಯಮ ಸೇರಿದಂತೆ ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಅತ್ಯುತ್ತಮ ಕೊಡುಗೆ ಹಿನ್ನಲೆಯಲ್ಲಿ 2011ರಲ್ಲಿ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದರು. 2019ರಲ್ಲಿ ಕೇರಳದ ಅತ್ಯುನ್ನತ ಮಾಧ್ಯಮದ ಸ್ವದೇಶಾಭಿಮಾನಿ ಕೇಸರಿ ಪ್ರಶಸ್ತಿಯನ್ನು ಸಹ ಪಡೆದಿದ್ದರು. ಅವರು ಹಾಂಗ್ ಕಾಂಗ್‌ನಲ್ಲಿ ಏಷ್ಯಾವೀಕ್ ಸಂಸ್ಥೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

ಇವರ ನಿಧನಕ್ಕೆ ಹಲವು ಕ್ಷೇತ್ರದ ಗಣ್ಯರು ಸಂತಾಪ ಸೂಚಿಸಿದ್ದಾರೆ.


## ನಿಧನ

### ಸಾವಂತ್ರೆವ್ವ ವೀರನಗೌಡ ಗಡ್ಡಿ



ಲಕ್ಕುಂಡಿ: ಇಲ್ಲಿಯ ಮಾರುತಿ ನಗರದ ನಿವಾಸಿ ಸಾವಂತ್ರೆವ್ವ ವೀರನಗೌಡ ಗಡ್ಡಿ (75) ಇತ್ತೀಚೆಗೆ ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

### ಶಿವಪುತ್ರಪ್ಪ ಬೈಲಪ್ಪ ಬಿಳೆಯಲಿ



ಗದಗ: ನಿವೃತ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳಾದ ಶಿವಪುತ್ರಪ್ಪ ಬೈಲಪ್ಪ ಬಿಳೆಯಲಿ (62) ಬುಧವಾರ ಬೆಳಿಗ್ಗೆ ನಗರದ ವಿರೇಶ್ವರ ನಗರದ ಮುಳಗುಂದ ರಸ್ತೆಯಲ್ಲಿನ ಸ್ವ ಗೃಹದಲ್ಲಿ ನಿಧನರಾದರು.

ಮೃತರು ಪತ್ನಿ, ಪುತ್ರ, ಸೇರಿದಂತೆ ಅಪಾರ ಅಪಾರ-ಬಂಧು ಬಳಗವನ್ನು ಅಗಲಿದ್ದಾರೆ.

**ಜಿಲ್ಲಾಡಳಿತದಲ್ಲಿ ಹಮ್ಮಿಕೊಂಡಿದ್ದ ಗಾಂಧೀಜಿ, ಶಾಸ್ತ್ರೀಜಿ ಜಯಂತಿ ಕಾರ್ಯಕ್ರಮದಲ್ಲಿ ಡಿ.ಸಿ ಸಿ.ಎನ್. ಶ್ರೀಧರ್**

# ಸತ್ಯ, ಸರಳತೆ ಗಾಂಧೀಜಿಯವರ ವಿಶೇಷತೆಗಳಾಗಿದ್ದವು

**■ ವಿಜಯಸಾಕ್ಷಿ ಸುದ್ದಿ, ಗದಗ**

ಮಹಾತ್ಮ ಗಾಂಧೀಜಿಯವರು ಅಹಿಂಸೆ ಮತ್ತು ಸತ್ಯಾಗ್ರಹದ ಅಸ್ತ್ರದಿಂದ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮರು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಬಣ್ಣಿಸಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರುಗಳ ಸಹಯೋಗದಲ್ಲಿ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರೀಜಿ ಯವರ 121ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗಾಂಧೀಜಿಯವರು ತಮ್ಮ ದೇಶದಲ್ಲಿಯೇ ಇರುವ ಸಾಮಾಜಿಕ ಸಮಸ್ಯೆಗಳಾದ ಅಸ್ಪೃಶ್ಯತೆ ಹಾಗೂ ಪರಕೀಯರ ದಬ್ಬಾಳಿಕೆ ವಿರುದ್ಧ ಹೋರಾಟ ನಡೆಸಿದರು. ಸತ್ಯ ಮತ್ತು ಸರಳತೆ ಇವರ ವಿಶೇಷತೆಗಳಾಗಿದ್ದವು. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ಅವರು ದೇಶಗಳಲ್ಲಿನ ಬಹಳಷ್ಟು ಕ್ಲಿಷ್ಟಕರ ಸಮಸ್ಯೆಗಳನ್ನೂ ಸಹ ಮಾತುಕತೆಯಿಂದ ಬಗೆಹರಿಸಬಹುದಾಗಿದೆ ಎಂದು ಸಮಾಜಕ್ಕೆ ತಿಳಿಸಿದ ಮಹಾತ್ಮರು ಎಂದರು.

ರಾಜ್ಯದಲ್ಲಿ ಜರುಗುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಪೂರ್ಣಗೊಳಿಸಿದ ಗದಗ ತಾಲೂಕಿನ ಶಿಕ್ಷಕರಾದ ಮಲ್ಲಮ್ಮ ಹೂಗಾರ, ಕಾಶಿಬಾಯಿ ಮದಿ, ಎಚ್.ಡಿ. ಕುರಿ, ಪ್ರದೀಪ ಚಿತ್ತರಗಿ, ಜಯಕುಮಾರ್, ರಂಗಪ್ಪನವರ, ಹುಸೇನಬಾದಶಾಹ ಮಂಗಳೂರ ಅವರನ್ನು ಜಿಲ್ಲಾಧಿಕಾರಿಗಳು ಸನ್ಮಾನಿಸಿದರು.

ಮಹಾತ್ಮ ಗಾಂಧೀಜಿಯವರ 156ನೇ ಜಯಂತಿ ಪ್ರಯುಕ್ತ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಿ ಸನ್ಮಾನಿಸಲಾಯಿತು. ಪ್ರೌಢಶಾಲಾ ವಿಭಾಗದಲ್ಲಿ ಸೌಮ್ಯ ದೇವೇಂದ್ರಪ್ಪ ಮೆಣಸಿನಕಾಯಿ-ಪ್ರಥಮ, ಸಮೀಕ್ಷಾ ಮೇಗಳಮನಿ-ದ್ವಿತೀಯ, ಸೌಮ್ಯ ಜಗ್ಗಲ-ತೃತೀಯ, ಪದವಿಪೂರ್ವ ವಿಭಾಗದಲ್ಲಿ ಐಶ್ವರ್ಯ ಎಂ.ತಮ್ಮಣ್ಣವರ-ಪ್ರಥಮ, ಸಾಹಿಲ್-ದ್ವಿತೀಯ, ಅಕ್ಷತಾ ಮಲ್ಲಪ್ಪ ಹೂಗಾರ-ತೃತೀಯ, ಪದವಿ/ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಸಹನಾ ಹೆಬಸೂರ-ಪ್ರಥಮ, ಕೃಷ್ಣಾ ದೂರಪ್ಪನವರ-ದ್ವಿತೀಯ, ಕೀರ್ತಿ ಮಾನ್ವಿ-ತೃತೀಯ, ಸುಮಿತ್ರಾ ಗವಾರಿ ಚತುರ್ಥ ಸ್ಥಾನ ಪಡೆದರು.



ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಪ್ರಾದಿಕಾರದ ಸದಸ್ಯ ಬಸವರಾಜ ಕಡೆಮನಿ, ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಸರ್ಕಾರಿ ನೌಕರರ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಎಂ.ಜಿ.ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಕನ್ನಡ ಸಹಾಯಕ ಪ್ರಾಧ್ಯಾಪಕ ಚಂದ್ರಪ್ಪ ಬಾರಂಗಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ ಸೇರಿದಂತೆ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು ಹಾಜರಿದ್ದರು.

ಕಲಾವಿದ ಡಾ. ವೆಂಕಟೇಶ ಅಲ್ಕೋಡ ಮಹಾತ್ಮ ಗಾಂಧೀಜಿಯವರ ಪ್ರಿಯ ಭಜನೆಗಳನ್ನು ಪ್ರಸ್ತುತಪಡಿಸಿದರು. ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮವನ್ನು ಪ್ರೊ. ಬಾಹುಬಲಿ ಜೈನರ್ ನಿರ್ವಹಿಸಿದರು.

> ಲಾಲ್‌ಬಹದೂರ್ ಶಾಸ್ತ್ರಿಯವರು ಭಾರತ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ನಂತರ ಪ್ರಧಾನಿಯಾಗಿದ್ದಾಗ ದೇಶದಲ್ಲಿ ಬರಗಾಲವಿದ್ದ ಕಾರಣ, ದೇಶದ ಜನತೆ ಆಹಾರದ ಕೊರತೆ ಅನುಭವಿಸುತ್ತಿರುವುದರಿಂದ ವಾರದಲ್ಲಿ ಒಂದು ದಿವಸ ದೇಶದ ಜನರೆಲ್ಲರೂ ಉಪವಾಸ ಮಾಡಬೇಕು ಎಂದರಲ್ಲದೆ, ಸ್ವತಃ ಶಾಸ್ತ್ರೀಜಿಯವರು ಕೂಡ ಉಪವಾಸ ಕೈಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಂಡರು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

# ಗಾಂಧೀಜಿಯವರ ಬದುಕೇ ಒಂದು ಸಂದೇಶ



**■ ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ಸ್ವಾವಲಂಬಿಯಾಗಿ ಸರ್ವತೋಮುಖ ಅಭಿವೃದ್ಧಿಯಾಗಬೇಕೆಂಬ ಕನಸು ಕಂಡಿದ್ದ ಮಹಾತ್ಮ ಗಾಂಧೀಜಿ ಅವರು ನುಡಿದಂತೆ ನಡೆದು, ನಡೆದಂತೆ ನುಡಿದು ತಮ್ಮ ಬದುಕನ್ನು ಮಾನವಕುಲದ ಶ್ರೇಯಸ್ಸಿಗೆ ಮುಡಿಪಾಗಿಟ್ಟಿದ್ದ ಮಹಾಸಂತರಾಗಿದ್ದು, ಅವರ ಸತ್ಯ, ಅಹಿಂಸೆ, ಸತ್ಯಾಗ್ರಹ, ಸರಳತೆ, ಕ್ಷಮೆ ಮುಂತಾದ ಸಂದೇಶಗಳು ಸಾರ್ವಕಾಲಿಕ ಜೀವನ ಮೌಲ್ಯಗಳಾಗಿವೆ ಎಂದು ಪ್ರೊ. ಸುಧಾ ಕೌಜಗೇರಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ಅವರ ಸರಳ, ಸಜ್ಜನ ಬದುಕೇ ಅವರ ಸಂದೇಶವಾಗಿದ್ದು, ಅವರ ಜೀವನ ಮೌಲ್ಯಗಳನ್ನು ಅರ್ಥೈಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್ ಘಟಕದ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ ಮಾತನಾಡಿ, ಗಾಂಧೀಜಿಯವರ 'ಸಶಸ್ತ್ರ ಶಕ್ತಿಗಿಂತ ನಿರಾಯುಧ ಅಹಿಂಸೆಯ ಶಕ್ತಿ ಶ್ರೇಷ್ಠವಾದುದು ಮತ್ತು ಕ್ರೌರ್ಯವನ್ನು ಕ್ರೌರ್ಯದಿಂದ ಎದುರಿಸುವುದು ನೈತಿಕ ಅವನತಿಗೆ ಕಾರಣವಾಗುತ್ತದೆ' ಎಂಬ ಸಂದೇಶಗಳನ್ನು ಮಾನವಕುಲ ಅರ್ಥೈಸಿಕೊಂಡರೆ ಸಮಾಜದಲ್ಲಿ ಶಾಂತಿ, ಸಹಬಾಳ್ವೆ, ಸಾಮರಸ್ಯ, ಭಾವೈಕ್ಯತೆ ಸಾಧ್ಯವೆಂದು ಹೇಳಿದರು.

ಪ್ರೊ. ಲಕ್ಷ್ಮಣ ಮುಳಗುಂದ, ಡಾ. ಎಂ.ವೈ. ಜಟ್ಟೆಣ್ಣವರ, ಪ್ರಶಾಂತ ಹುಲಕುಂದ ಗಾಂಧೀಜಿ ಅವರ ಜೀವನ ಮೌಲ್ಯಗಳ ಕುರಿತು ಮಾತನಾಡಿದರು. ರಮೇಶ ಹುಲಕುಂದ ಕಾರ್ಯಕ್ರಮ ನಡೆಸಿಕೊಟ್ಟರು. ಬಸವರಾಜ ಬಳಗಾನೂರಮಠ ವಂದಿಸಿದರು.

# ಸ್ವಚ್ಛತಾ ಕೆಲಸಗಾರರ ಪಾತ್ರ ಮಹತ್ವದ್ದು



**■ ವಿಜಯಸಾಕ್ಷಿ ಸುದ್ದಿ, ಗದಗ**


ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹುದ್ದೂರ ಶಾಸ್ತ್ರೀಜಿ ಅವರ ಸಂದೇಶವನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ನಗರದ ಗಾಂಧೀ ಸರ್ಕಲ್ ಹತ್ತಿರ ಗುರುವಾರ ಜಿಲ್ಲಾಡಳಿತ, ಗದಗ-ಬೆಟಗೇರಿ ನಗರಸಭೆ ಆಶ್ರಯದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹುದ್ದೂರ ಶಾಸ್ತ್ರೀಜಿ ಜನ್ಮ ದಿನಾಚರಣೆ ಅಂಗವಾಗಿ ಮಹಾತ್ಮ ಗಾಂಧೀಜಿಯವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿದರು.

ಇದೇ ಸಂಭರ್ದದಲ್ಲಿ ಸ್ವಚ್ಛತಾ ಹೀ ಸೇವಾ ಹಾಗೂ ನಮಸ್ತೆ ಅಭಿಯಾನದಡಿಯಲ್ಲಿ ಗುರುತಿಸಲಾದ ಸೆಪ್ಟಿಕ್ ಟ್ಯಾಂಕ್ ಮತ್ತು ಸೀವರ್ ಸ್ವಚ್ಛತಾ ಕೆಲಸಗಾರರಿಗೆ ಸುರಕ್ಷಾ ಕಿಟ್‌ಗಳನ್ನು ಹಾಗೂ ಆಯುಷ್ಮಾನ್ ಭಾರತ್ ಕಾರ್ಡ್‌ಗಳನ್ನು ವಿತರಿಸಿ, ನಗರದ ಸ್ವಚ್ಛತೆ ಕಾಪಾಡುವಲ್ಲಿ ಸ್ವಚ್ಛತಾ ಕೆಲಸಗಾರರ ಪಾತ್ರ ಮಹತ್ವದಾಗಿದ್ದು, ನಗರದ ಎಲ್ಲಾ ಪೌರಕಾರ್ಮಿಕರು ನಗರಸಭೆಯಿಂದ ವಿತರಿಸಲಾಗುವ ಸುರಕ್ಷಾ ಕಿಟ್‌ಗಳನ್ನು ಧರಿಸಿಕೊಂಡು ಕೆಲಸ ಮಾಡವಂತೆ ಅಧಿಕಾರಿಗಳು ಕ್ರಮವಹಿಸಬೇಕೆಂದು ಹೇಳಿದರು. ಇದೇ ಸಂದರ್ಭದಲ್ಲಿ ಡಾ. ಬಿ.ಆರ್ ಅಂಬೇಡ್ಕರರ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಉದ್ಯಾನದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂಧರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೊಟೂರು, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಕರ್ನಾಟಕ ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ಕಾರ್ಯ ಪಾಲಕ ಅಭಿಯಂತರ ಜಗದೀಶ ಹೊಸಮನಿ, ಅಧಿಕಾರಿಗಳಾದ ಬಸವರಾಜ ಬಳ್ಳಾರಿ, ಆನಂದ ಬದಿ, ಎಚ್.ಎ. ಬಂಡಿವಡ್ಡರ ಸೇರಿದಂತೆ ಸಿಬ್ಬಂದಿ ವರ್ಗದವರು, ಎನ್.ಸಿ.ಸಿ ವಿದ್ಯಾರ್ಥಿಗಳು, ನಗರಸಭೆ ಕಮ್ಯೂನಿಟಿ ಮೊಬಲೈಜರ್‌ಗಳು ಹಾಜರಿದ್ದರು.

# ಮಹನೀಯರ ಆದರ್ಶಗಳನ್ನು ಪಾಲಿಸೋಣ



**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಹಾತ್ಮ ಗಾಂಧೀಜಿಯವರು ಅಹಿಂಸೆ, ಶಾಂತಿ ಮತ್ತು ಸತ್ಯಾಗ್ರಹದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟ ಮಹಾತ್ಮರು ಎಂದು ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ. 1ರಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹಾದ್ದೂರ ಶಾಸ್ತ್ರಿಯವರ ಜಯಂತಿ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ಆದರ್ಶಗಳನ್ನು ಪಾಲಿಸೋಣ ಎಂದರು.

ಎಂ.ಎಂ. ಕೊಪ್ಪಳ, ಎಂ.ಎಂ. ಮೇಗಲಮನಿ, ಎಸ್.ಎಚ್. ಭಜಂತ್ರಿ, ಎಸ್.ವಿ. ಹಿರೇಮಠ, ವಿ.ಎಂ. ಕಂಠಿ, ಎಸ್.ಡಿ. ಪಂಡಿತ ವಿ.ಡಿ. ಸಿದ್ದನಗೌಡರ ಇದ್ದರು.

# ಕೆರೆಯಲ್ಲಿ ಈಜಲು ಹೋದ ಮೂವರು ಬಾಲಕರು ದುರ್ಮರಣ!

**■ ವಿಜಯಸಾಕ್ಷಿ ಸುದ್ದಿ, ಚಿಕ್ಕಬಳ್ಳಾಪುರ**

ಜಿಲ್ಲೆಯ ಬಾಗೇಪಲ್ಲಿ ತಾಲೂಕಿನಲ್ಲಿ ಕೆರೆಯಲ್ಲಿ ಈಜಲು ಹೋದ ಮೂವರು ಬಾಲಕರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಜರುಗಿದೆ. ಮೃತರನ್ನು ವಿಷ್ಣು (14), ನಿಹಾಲ್ ರಾಜ್ (12) ಮತ್ತು ಹರ್ಷವರ್ಧನ್ (16) ಎಂದು ಗುರುತಿಸಲಾಗಿದೆ. ಇವರು ಅಚೇಪಲ್ಲಿ ಗ್ರಾಮದವರು ಎನ್ನಲಾಗಿದೆ.

# ಆರ್‌ಎಸ್‌ಎಸ್ ದೇಶದ ಹೆಮ್ಮೆ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕೇಶವ ಬಲರಾಮ ಹೆಗಡೆವಾರ ಅವರಿಂದ ಜನ್ಮತಾಳಿದ ರಾಷ್ಟ್ರೀಯ ಸ್ವಯಂ ಸೇವಾ ಸಂಘ ದೇಶದ ಉನ್ನತಿಗೆ ಶ್ರಮಿಸಿದ ಏಕೈಕ ಶ್ರೇಷ್ಠ ಸಂಘವಾಗಿದ್ದು, 100 ಸಂವತ್ಸರಗಳನ್ನು ಕಂಡಿರುವ ಆರ್‌ಎಸ್‌ಎಸ್ ದೇಶದ ಬೆಳವಣಿಗೆಯಲ್ಲಿ ಮಹತ್ತರ ಕೊಡುಗೆ ನೀಡಿದೆ ಎಂದು ಆರ್‌ಎಸ್‌ಎಸ್‌ನ ಗದಗ ಜಿಲ್ಲಾ ಪ್ರಮುಖ ಮೋಹನ ಗೌಡ ಹೇಳಿದರು.

ಅವರು ಗುರುವಾರ ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಆರ್‌ಎಸ್‌ಎಸ್ 100 ವರ್ಷಗಳ ಸಂಭ್ರಮಾಚರಣೆಯಲ್ಲಿ ಸ್ವಯಂ ಸೇವಕರನ್ನು ಉದ್ದೇಶಿಸಿ ಮಾತನಾಡಿದರು.

ಸ್ವತಂತ್ರ ಭಾರತದ ಕಲ್ಪನೆಯಲ್ಲಿ ಉದಯಿಸಿದ ಆರ್‌ಎಸ್‌ಎಸ್ ಸ್ವಾತಂತ್ರ್ಯ ಗಳಿಸುವುಲ್ಲಿ ಮಹತ್ತರ ಪಾತ್ರ ವಹಿಸಿದ್ದು, ಸಂಘವು ಇಂದು ಅಂತಾರಾಷ್ಟ್ರೀಯ ಮಟ್ಟದಲ್ಲಿ ಶ್ರೇಷ್ಠ ಸಂಘ ಎನ್ನುವ ಕೀರ್ತಿಗೆ ಪಾತ್ರವಾಗಿದೆ, ಸಂಘದ ಸೇವಕರು ದೇಶದ ಬಗ್ಗೆ ಸದಾ ತುಡಿಯುವ ಮನಸ್ಸು ಹೊಂದಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘವನ್ನು ನೂರು ವರ್ಷಗಳ ಹಿಂದೆ ವಿಜಯದಶಮಿಯ ಪವಿತ್ರ ಸಂದರ್ಭದಲ್ಲಿ ಸ್ಥಾಪಿಸಲಾಗಿದ್ದು, ದೇಶ ನನಗೆ ಏನು ನೀಡಿದೆ ಎನ್ನುವ ಬದಲು ದೇಶಕ್ಕೆ ನನ್ನಿಂದ ಏನು ಕೊಡುಗೆ ನೀಡಲು ಸಾಧ್ಯ ಎಂಬ ಬಗ್ಗೆ ಚಿಂತಿಸುವ ಕಾರ್ಯವಾಗಬೇಕು. ಸಮಾಜದ ಏಳ್ಗೆಗಾಗಿ ಶ್ರಮಸುವಲ್ಲಿ ಯುವ ಪಡೆ, ದೇಶದ ನಾಗರಿಕರು ನಿರಂತರವಾಗಿ ಸಾಗಬೇಕಾಗಿದೆ ಎಂದು ಹೇಳಿದರು.

ನಿವೃತ್ತ ಶಿಕ್ಷಕ ಯಲ್ಲಪ್ಪ ಲಿಂಗಶೆಟ್ಟಿ ಮಾತನಾಡಿ, ಸಂಘವು ವಿವಿಧ ಕ್ಷೇತ್ರಗಳಲ್ಲಿ ತನ್ನದೇ ಆದ ವಿಶೇಷ ಕೊಡುಗೆಯನ್ನು ನೀಡಿದ್ದು, ದೇಶದ ಶ್ರೇಷ್ಠತೆ, ಸಂಸ್ಕೃತಿಯನ್ನು ಜಗತ್ತಿನಾದ್ಯಂತ ಬೆಳಗುವ ಕಾರ್ಯವನ್ನು ಮಾಡಿದೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ನೂರು ವರ್ಷಗಳ ಹಿಂದೆ ರಾಷ್ಟ್ರೀಯತೆಯ ಬೀಜವನ್ನು ದೇಶದ ಜನತೆಯಲ್ಲಿ ಬಿತ್ತಿರುವ ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಮಾನೋತ್ಸವದ ವರ್ಷವನ್ನು ವೀಕ್ಷಿಸುವುದು ಪ್ರಸ್ತುತ ನಮ್ಮೆಲ್ಲ ಸ್ವಯಂಸೇವಕರಿಗೆ ದೊರೆತ ಸೌಭಾಗ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲೂಕಿನ ನೂರಾರು ಸ್ವಯಂಸೇವಕರು ಪಾಲ್ಗೊಂಡು ವೀರ ಘೋಷಣೆಗಳನ್ನು ಮೊಳಗಿಸಿದರು.

**ಜಯಂತಿಯ ದಿನವೂ ಹೂಮಾಲೆ ಕಾಣದ ತಹಸೀಲ್ದಾರ ಕಚೇರಿ ಆವರಣದ ಗಾಂಧಿ ಪ್ರತಿಮೆ**


# ರಾಷ್ಟ್ರಪಿತನಿಗೆ ಇಷ್ಟೇ ಗೌರವ ಸಾಕೇ?!

**■ ವಿಜಯಸಾಕ್ಷಿ ಸುದ್ದಿ, ರೋಣ**

ದೇಶದಲ್ಲೆಡೆ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಜನ್ಮ ದಿನಚಾರಣೆ ಸಂಭ್ರಮದಿಂದ ನಡೆದರೆ, ರೋಣದಲ್ಲಿ ಮಾತ್ರ ಸರ್ಕಾರಿ ಅಧಿಕಾರಿಗಳು ಮಹಾತ್ಮ ಗಾಂಧಿಯವರನ್ನೇ ಮರೆತಂತಿದೆ. ಕಾರಣ, ತಹಸೀಲ್ದಾರ್ ಕಚೇರಿಯ ಆವರಣದಲ್ಲಿರುವ ಗಾಂಧಿ ಪ್ರತಿಮೆ ಹೂಮಾಲೆಯನ್ನೂ ಕಾಣದೆ ನಿರ್ಲಕ್ಷ್ಯಕ್ಕೊಳಗಾಗಿದೆ.

ದೇಶಕ್ಕಾಗಿ, ದೇಶದ ಸ್ವಾತಂತ್ರ್ಯಕ್ಕಾಗಿ, ನಾಡು-ನುಡಿ ಮತ್ತು ಕನ್ನಡದ ಏಕೀಕರಣಕ್ಕಾಗಿ ರೋಣ ತಾಲೂಕಿನ ಕೊಡುಗೆ ದೊಡ್ಡದು ಎಂಬುದು ದೇಶಕ್ಕೇ ತಿಳಿದ ಸಂಗತಿ. ಶಿಕ್ಷಣ ಪ್ರೇಮಿ ಸಂಗನಗೌಡ ಪಾಟೀಲ, ಜಕ್ಕಲಿಯ ಅಂದಾನಪ್ಪ ದೊಡ್ಡಮೇಟಿ, ಅಬ್ಬಿಗೇರಿ ವಿರೂಪಾಕ್ಷಪ್ಪನವರು ಸೇರಿದಂತೆ ಅನೇಕ ಮಹನೀಯರು ಜನ್ಮ ತಾಳಿದ ಪುಣ್ಯಭೂಮಿ ರೋಣ ಎಂಬುದು ತಹಸೀಲ್ದಾರರಿಗೆ, ಕಚೇರಿಯ ಸಿಬ್ಬಂದಿಗೆ ತಿಳಿದಿಲ್ಲವೇ ಎಂಬ ಪ್ರಶ್ನೆಗಳು ಮೂಡಿವೆ.

ರೋಣ ಪಟ್ಟಣದ ಸ್ವಾತಂತ್ರ್ಯ ಸೇನಾನಿ ದಿ ಗುರುಪಾದಪ್ಪ ಸಂಗಪ್ಪ ಸಂತೋಜಿಯವರು ದೇಶದ ಮತ್ತು ನಾಡಿನ ಉಳಿವಿಗಾಗಿ ನಡೆದ ಹೋರಾಟದಲ್ಲಿ ತಮ್ಮನ್ನು ತಾವು ಸಮರ್ಪಿಸಿಕೊಂಡವರು. ಪಟ್ಟಣದ ಸಂತೋಜಿ ಕುಟುಂಬಸ್ಥರು ಅವರ ನೆನಪಿನಲ್ಲಿ ತಹಸೀಲ್ದಾರ ಕಚೇರಿಯ ಆವರಣದಲ್ಲಿ ಗಾಂಧಿ ಪ್ರತಿಮೆಯನ್ನು ಸ್ಥಾಪಿಸಿದ್ದಾರೆ. ಪ್ರತಿಮೆ ಕಚೇರಿಯ ಆವರಣದಲ್ಲಿಯೇ ಇದ್ದರೂ ಕೂಡ ಪ್ರತಿಮೆ ಹಾಗೂ ಸುತ್ತಲಿನ




ಸ್ಥಳವನ್ನು ಸ್ವಚ್ಛಗೊಳಿಸದಿರುವುದು ರಾಷ್ಟ್ರಪಿತನ ಬಗ್ಗೆ ಅಧಿಕಾರಿಗಳಿಗೆ ಇಷ್ಟೇ ಗೌರವವೇ ಎಂದು ಸಂಶಯ ಮೂಡಿಸಿದೆ.

ಕಚೇರಿಯಲ್ಲಿ ಗಾಂಧಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಕಚೇರಿಯ ಆವರಣದಲ್ಲೇ ಇರುವ ಪ್ರತಿಮೆಯನ್ನು ನಿರ್ಲಕ್ಷ್ಯ ಮಾಡಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಸ್ವಾತಂತ್ರ ಸಂಗ್ರಾಮದಲ್ಲಿ ಅಖಂಡ ರೋಣ ತಾಲೂಕಿನ ಕೊಡುಗೆ ದೊಡ್ಡದು. ತಾಲೂಕಿನ ನೂರಾರು ಸ್ವಾತಂತ್ರ್ಯ ಸೇನಾನಿಗಳು ನಾಡು-ನುಡಿಗಾಗಿ ಶ್ರಮಿಸಿದ್ದಾರೆ. ಅವರೆಲ್ಲರ ಹೆಸರುಗಳು ಅಜರಾಮರವಾಗಿ ಉಳಿಯಬೇಕು ಎಂಬ ದೃಷ್ಟಿಯಿಂದ ತಹಸೀಲ್ದಾರ ಕಚೇರಿಯ ಆವರಣದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ ಪುತ್ಥಳಿಯನ್ನು ಸ್ಥಾಪಿಸಲಾಗಿದೆ. ಅಧಿಕಾರಿಗಳು ಪ್ರತಿಮೆಯನ್ನು ಸ್ವಚ್ಛಗೊಳಿಸಿ, ಹೂಮಾಲೆಯನ್ನು ಹಾಕದಿರುವ ಸುದ್ದಿ ಕೇಳಿ ನಮ್ಮ ಮನಸ್ಸಿಗೆ ನೊವು ತಂದಿದೆ ಎಂದು ಸಂತೋಜಿ ಕುಟುಂಬಸ್ಥರು ಬೇಸರ ವ್ಯಕ್ತಪಡಿಸಿದರು.



> ಇಡೀ ದೇಶವೇ ರಾಷ್ಟ್ರಪಿತನ ಜನ್ಮ ದಿನಚಾರಣೆಯಲ್ಲಿ ಸಡಗರದಿಂದ ಪಾಲ್ಗೊಂಡಿದೆ. ಗಾಂಧೀಜಿಯವರು ರೋಣ ತಾಲೂಕಿನ ಜಕ್ಕಲಿ ಗ್ರಾಮಕ್ಕೂ ಬಂದು ಹೋಗಿದ್ದಾರೆ. ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ರಾಷ್ಟ್ರಪಿತನ ಪ್ರತಿಮೆಗೆ ಹೂ ಮಾಲೆಯನ್ನೂ ಹಾಕದಿರುವುದು ಖಂಡನೀಯ. ತಹಸೀಲ್ದಾರರೇ ಇಷ್ಟೊಂದು ನಿರ್ಲಕ್ಷ್ಯ ವಹಿಸಿದ್ದು ನಿಜಕ್ಕೂ ತಪ್ಪು. ಅಧಿಕಾರಿಗಳ ಇಂತಹ ನಡೆಯನ್ನು ಸಮಾಜ ಒಪ್ಪಲು ಸಾಧ್ಯವಿಲ್ಲ.
>
> **– ರವೀಂದ್ರನಾಥ ದೊಡ್ಡಮೇಟಿ.**
> **ಸಾಹಿತಿಗಳು, ಪ್ರಗತಿಪರ ಚಿಂತಕರು**

> ಬೆಳಿಗ್ಗೆ ಕಚೇರಿಗೆ ಹೋಗಿ ಗಾಂಧೀಜಿಯವರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿದ್ದೇನೆ. ಆದರೆ, ಆವರಣದಲ್ಲಿರುವ ಗಾಂಧೀಜಿಯವರ ಪ್ರತಿಮೆಯ ಕಡೆ ಗಮನ ಹರಿಸಿಲ್ಲ. ಇನ್ನೊಮ್ಮೆ ಹೀಗಾಗದಂತೆ ನೋಡಿಕೊಳ್ಳುತ್ತೇನೆ.
>
> **– ನಾಗರಾಜ ಕೆ.**
> **ತಹಸೀಲ್ದಾರರು, ರೋಣ.**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka